ಸಂಪುಟ 01 । ಸಂಚಿಕೆ 120 । ಬುಧವಾರ 18 ಮಾರ್ಚ್ 2026 । ಪುಟ 4 । ಬೆಲೆ-2 ರೂ.

ಇರ್ಫಾನ್ ಕೆ
ಸಂಪಾದಕರು

M A ವಹಾಬ್
ಪ್ರಧಾನ ಸಂಪಾದಕರು

# ನೈಜ್ಯ ದೆಸೆ

NAIJYA DESE

ಸತ್ಯದ ದಿಕ್ಕು TRUE PATH

ಕನ್ನಡ ದಿನ ಪತ್ರಿಕೆ

ಸಿಂಧನೂರು, ಮಸ್ಕಿ
ಮಾನ್ವಿ, ಅಂಗಸೂರು,
ರಾಯಚೂರ,ದೇವದುರ್ಗ
ಬಳ್ಳಾರಿ, ಕೊಪ್ಪಳ
ಯಾದಗಿರಿ, ಕಲಬುರ್ಗಿ,
ಬೀದರ, ವಿಜಯಪುರ.
ಗದಗ, ವಿಜಯನಗರ.
ಏಕಕಾಲಕ್ಕೆ ಪ್ರಕಟಣೆ

REGIONAL KANNADA DAILY MORNING

RNI code: KNKAN/25/A3581 ಮೋ: 9902277588, 9880707587, 9008787586 naijyadese@gmail.com

## ಈ ದಿನದ ವಿಶೇಷ

1) ಶಸ್ತ್ರ ಕಾರ್ಖಾನೆಗಳ ದಿನ

.ಭಾರತದಾದ್ಯಂತ ಪ್ರತಿ ವರ್ಷ ಮಾರ್ಚ್ 18 ರಂದು ಶಸ್ತ್ರ ಕಾರ್ಖಾನೆಗಳ ದಿನವನ್ನು ಆಚರಿಸಲಾಗುತ್ತದೆ. ಈ ಸಂದರ್ಭದಲ್ಲಿ, ಶಸ್ತ್ರ ಕಾರ್ಖಾನೆ, ಫೀಲ್ಡ್ ಗನ್ ಕಾರ್ಖಾನೆ, ಸಣ್ಣ ಶಸ್ತ್ರ ಕಾರ್ಖಾನೆ, ಶಸ್ತ್ರ ಪ್ಯಾರಾಚೂಟ್ ಕಾರ್ಖಾನೆ ಮತ್ತು ಶಸ್ತ್ರ ಸಲಕರಣೆ ಕಾರ್ಖಾನೆಗಳು ಈ ದಿನವನ್ನು ಆಚರಿಸುತ್ತವೆ.

## ಸುಭಾಷಿತ

ನಿಮ್ಮ ಕನಸುಗಳ ಬೆನ್ನುಹತ್ತಿ... ಆದರೆ, ಅದಕ್ಕೆ ಅಡ್ಡದಾರಿಗಳು ಇಲ್ಲ ಎಂಬುದನ್ನು ಅರಿಯಿರಿ.

ಸಚಿನ್ ತೆಂಡೂಲ್ಕರ್

# ಮಹಿಳಾ ಮೀಸಲಾತಿ ಅನುಷ್ಠಾನಕ್ಕೆ ಪ್ರಧಾನಿ ಸಭೆ ಕರೆಯಲಿ ;ಖರ್ಗೆ



**ನವದೆಹಲಿ: ಮಹಿಳಾ ಮೀಸಲಾತಿ ಕಾಯ್ದೆಯ ಅನುಷ್ಠಾನಕ್ಕಾಗಿ ವಿಧಾನಗಳು ಮತ್ತು ಮಾರ್ಗಸೂಚಿಯನ್ನು ಚರ್ಚಿಸಲು ಪ್ರಧಾನಿ ನರೇಂದ್ರ ಮೋದಿಯವರ ಅಧ್ಯಕ್ಷತೆಯಲ್ಲಿ ಸರ್ವಪಕ್ಷ ಸಭೆಯನ್ನು ಆದ- ‍ಷ್ಟು ಬೇಗ ಕರೆಯಬೇಕು ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸಂಸದೀಯ ವ್ಯವಹಾರಗಳ ಸಚಿವ** ಕಿರಣ್ ರಿಜಿಜು ಅವರಿಗೆ ತಿಳಿಸಿದ್ದಾರೆ.

ರಿಜಿಜು ಅವರಿಗೆ ಬರೆದ ಪತ್ರಕ್ಕೆ ಪ್ರತಿಕ್ರಿಯಿಸಿದ ಖರ್ಗೆ, ನಾರಿ ಶಕ್ತಿ ವಂದನ ಅಧಿನಿಯಮ್ ಕಾಯ್ದೆಯನ್ನು ಸೆಪ್ಟೆಂಬರ್ 2023 ರಲ್ಲಿ ಸಂಸತ್ತು ಸರ್ವಾನುಮತದಿಂದ ಅಂಗೀಕರಿಸಿದೆ ಎಂದು ಗಮನಿಸಿದರು. ಮೂವತ್ತು ತಿಂಗಳ ನಂತರ, ಸರ್ಕಾರವು ನಿಮ್ಮ ಮಾತಿನಲ್ಲಿ ಹೇಳುವುದಾದರೆ, ಈ ಮಹತ್ವದ ಸಾಂವಿಧಾನಿಕ ತಿದ್ದುಪಡಿಯ ಅನುಷ್ಠಾನಕ್ಕಾಗಿ ವಿಧಾನಗಳು ಮತ್ತು ಮಾರ್ಗಸೂಚಿಯ ಕುರಿತು ಚರ್ಚಿಸಲು ನನ್ನೊಂದಿಗೆ ಮತ್ತು ನನ್ನ ಪಕ್ಷದ ಹಿರಿಯ ಸದಸ್ಯರೊಂದಿಗೆ ಸಂವಹನ ನಡೆಸಲು ಅವಕಾಶವನ್ನು ಹುಡುಕುತ್ತಿದೆ ಎಂದಿದ್ದಾರೆ. ಈ ವಿಷಯದ ಬಗ್ಗೆ ನೀವು ಕೆಲವು ದಿನಗಳ ಹಿಂದೆ ನನ್ನೊಂದಿಗೆ ಮಾತನಾಡಿದ್ದೀರಿ.

ರಾಜ್ಯಸಭೆಯಲ್ಲಿ ಕಾಂಗ್ರೆಸ್ ಸಂಸದೀಯ ಪಕ್ಷದ ಮುಖ್ಯ ಸಚೇತಕ ಜೈರಾಮ್ ರಮೇಶ್ ಅವರಂತೆ, ಸರ್ಕಾರವು ಸರ್ವಪಕ್ಷ ಸಭೆಯನ್ನು ಕರೆಯಬೇಕು, ಅಲ್ಲಿ ಅಂತಹ ಮಾರ್ಗಸೂಚಿಯನ್ನು ಎಲ್ಲಾ ವಿರೋಧ ಪಕ್ಷಗಳೊಂದಿಗೆ ಒಟ್ಟಾಗಿ ಚರ್ಚಿಸಬಹುದು ಎಂಬುದು ಐಎನ್‌ಸಿಯ ಅಭಿಪ್ರಾಯವಾಗಿದೆ ಎಂದು ನಾನು ಈಗಾಗಲೇ ನಿಮಗೆ ತಿಳಿಸಿದ್ದೇನೆ ಎಂದು ಖರ್ಗೆ ಹೇಳಿದರು. ಪ್ರಧಾನಿಯವರ ಅಧ್ಯಕ್ಷತೆಯಲ್ಲಿ ಇಂತಹ ಸರ್ವಪಕ್ಷ ಸಭೆಯನ್ನು ಆದಷ್ಟು ಬೇಗ ಕರೆಯಬೇಕೆಂದು ನಾನು ಭಾವಿಸುತ್ತೇನೆ. ಇದು ಸಂಸದೀಯ ಪ್ರಜಾಪ್ರಭುತ್ವದ ಅತ್ಯುತ್ತಮ ಸಂಪ್ರದಾಯಗಳಿಗೆ ಅನುಗುಣವಾಗಿರುತ್ತದೆ ಎಂದು ಕಾಂಗ್ರೆಸ್ ಮುಖ್ಯಸ್ಥರು ಹೇಳಿದರು.

ಸೀಮಿತ ನಿರ್ಣಯ ಪ್ರಕ್ರಿಯೆ ಪೂರ್ಣಗೊಳ್ಳುವ ಮೊದಲು ಮಹಿಳಾ ಮೀಸಲಾತಿ ಕಾಯ್ದೆಯನ್ನು ಜಾರಿಗೆ ತರಲು ಪ್ರಯತ್ನಿಸುತ್ತಿರುವ ಸರ್ಕಾರ, ಸಂಸತ್ತಿನ ಬಜೆಟ್ ಅಧಿವೇಶನದಲ್ಲಿ ಕಾನೂನನ್ನು ತಿದ್ದುಪಡಿ ಮಾಡಲು ಮಸೂದೆಯನ್ನು ತರುವ ಸಾಧ್ಯತೆಯಿದೆ.ಸಂವಿಧಾನ ತಿದ್ದುಪಡಿ ಮಸೂದೆಯನ್ನು ಸಂಸತ್ತಿನಲ್ಲಿ ಸುಗಮವಾಗಿ ಮಂಡಿಸಲು ವಿರೋಧ ಪಕ್ಷಗಳನ್ನು ಮಂಡಳಿಗೆ ತರಲು ಸಲಹೆಗಳನ್ನು ಕಳುಹಿಸಲಾಗಿದೆ ಎಂದು ಸರ್ಕಾರಿ ಮೂಲಗಳು ತಿಳಿಸಿವೆ. ಆದರೆ, ಕೇಂದ್ರ ಸಚಿವ ಸಂಪುಟವು ಇನ್ನೂ ಪ್ರಸ್ತಾವಿತ ಕ್ರಮವನ್ನು ಅಂಗೀಕ- ರಿಸಿಲ್ಲ ಎಂದು ಮೂಲಗಳು ತಿಳಿಸಿವೆ.

ಈ ಶಾಸನವನ್ನು ಮೊದಲು ರಾಜ್ಯಸಭೆಯಲ್ಲಿ ಪರಿಚಯಿಸುವ ಸೂಚನೆಗಳಿವೆ, ಬಹುಶಃ ಮುಂದಿನ ವಾರ, ಇದನ್ನು ಸಚಿವ ಸಂಪುಟ ಅನುಮೋದಿಸಿದ ನಂತರ ಎಂದು ಅವರು ಹೇಳಿದರು. ಮಹಿಳಾ ಮೀಸಲಾತಿ ಕಾಯ್ದೆಯನ್ನು 2023 ರಲ್ಲಿ ಸಂಸತ್ತು ಅಂಗೀಕರಿಸಿತು. ಲೋಕಸಭೆ ಮತ್ತು ರಾಜ್ಯ ವಿಧಾನಸಭೆಗಳಲ್ಲಿ ಮಹಿಳೆಯರಿಗೆ ಶೇಕಡಾ 33 ರಷ್ಟು ಮೀಸಲಾತಿ ನೀಡುವ ನಿಬಂಧನೆಯನ್ನು ಸಂವಿಧಾನವನ್ನು ತಿದ್ದುಪಡಿ ಮಾಡುವ ಮೂಲಕ ತರಲಾಯಿತು, ಆದರೆ ಅದು ಸೀಮಾ ನಿರ್ಣಯ ಪ್ರಕ್ರಿಯೆ ಪೂರ್ಣಗೊಂಡ ನಂತರ ಜಾರಿಗೆ ಬರುತ್ತದೆ.

## ಮಾರ್ಚ್ 25ರಂದು ಹರಾಜು ಪ್ರಕ್ರಿಯೆ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ವಿವಿಧ ವಿಭಾಗಗಳ ಅನುಪಯುಕ್ತ ಉಪಕರಣಗಳನ್ನು/ ವಸ್ತುಗಳನ್ನು ನಿಯಮಾನುಸಾರ ವಿಲೇವಾರಿ ಮಾಡಲು ಮಾರ್ಚ್ 25ರ ಬೆಳಿಗ್ಗೆ 11.30ಕ್ಕೆ ರಂದು ಸಾರ್ವಜನಿಕವಾಗಿ ಹರಾಜು ಮಾಡಲು ತೀರ್ಮಾನಿಸಲಾಗಿದ್ದು, ಆಸಕ್ತ ಸಾರ್ವಜನಿಕರು ಈ ಹರಾಜು ಪ್ರಕ್ರಿಯೆಯಲ್ಲಿ ಭಾಗವಹಿಸಬಹುದಾಗಿದೆ.**

ಹರಾಜಿನಲ್ಲಿ ಸರ್ಕಾರವು ನಿಗಧಿಪಡಿಸಿರುವ ಮೊತ್ತಕ್ಕಿಂತ ಅತೀ ಹೆಚ್ಚಿನ ಬೆಲೆಯನ್ನು ಕೂಗಿದ ಬಿಡ್ಡುದಾರರು ತಕ್ಷಣವೇ ಹಣ ಸಂದಾಯ ಮಾಡಿ ರಶೀದಿಯನ್ನು ಪಡೆಯತಕ್ಕದ್ದು ಹಾಗೂ ತಮ್ಮ ಸ್ವಂತ ಖರ್ಚಿನಲ್ಲಿ ಬಂದು ಒಂದು ವಾರದೊಳಗೆ ಅನುಪಯುಕ್ತ ಉಪಕರಣಗಳನ್ನು/ ವಸ್ತುಗಳನ್ನು ತೆಗೆದುಕೊಂಡು ಹೋಗಬೇಕು. ಹೆಚ್ಚಿನ ಮಾಹಿತಿಗಾಗಿ ಸಂಸ್ಥೆಯ ಪ್ರಾಚಾರ್ಯರನ್ನು ಅಥವಾ ಕಚೇರಿ ಅಧೀಕ್ಷಕರನ್ನು ಸಂಪರ್ಕಿಸಬಹುದಾಗಿದೆ ಎಂದು ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜಿನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಹೊಸದಾಗಿ ಕೆ.ಎಸ್.ಆರ್.ಪಿ ಪಡೆಯನ್ನು ಸ್ಥಾಪಿಸುವ ಪ್ರಸ್ತಾವನೆ :ಡಾ: ಜಿ.ಪರಮೇಶ್ವರ್

ನೈಜ್ಯ ದೆಸೆ ನ್ಯೂಸ್



**ರಾಯಚೂರು: ಜಿಲ್ಲೆಯಲ್ಲಿ ಹೊಸದಾಗಿ ಕೆ. ಎಸ್.ಆರ್.ಪಿ ಪಡೆಯನ್ನು ಸ್ಥಾಪಿಸುವ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಅಗತ್ಯತೆ ಆಧಾರದ ಮೇಲೆ ರಾಯಚೂರು ಜಿಲ್ಲೆಯಲ್ಲಿ ಕೆ.ಎಸ್.ಆರ್.ಪಿ ಪಡೆ ಸ್ಥಾಪಿಸಲಾಗುವುದು ಎಂದು ಗೃಹ ಸಚಿವ ಡಾ: ಜಿ.ಪರಮೇಶ್ವರ್ ಅವರು ತಿಳಿಸಿದರು.**

ಇಂದು ವಿಧಾನಸಭೆಯ ಕಲಾಪದ ವೇಳೆ ಮಸ್ಕಿ ಕ್ಷೇತ್ರದ ಶಾಸಕ ಬಸನಗೌಡ ತುರುವಿಹಾಳ್ ಇವರು ಕಲ್ಯಾಣ ಕರ್ನಾಟಕ ಭಾಗದಲ್ಲಿ ಕೆ.ಎಸ್.ಆರ್.ಪಿ ಪಡೆ ಅಗತ್ಯವಿದ್ದು, 175 ಎಕರೆ ಜಾಗವನ್ನು ಹಾಗೂ ಕೆ.ಕೆ. ಆರ್.ಡಿ.ಬಿ ಯ ಅನುದಾನವನ್ನು ಸಹ ನೀಡಲಾಗುವುದು ಎಂದು ತಿಳಿಸಿ ಕಲ್ಯಾಣ ಕರ್ನಾಟಕ ಭಾಗದ ಎಲ್ಲಾ ಶಾಸಕರು ಗೃಹ ಸಚಿವರಿಗೆ ಈಗಾಗಲೇ ಮನವಿ ಸಲ್ಲಿಸಲಾಗಿದೆ. ಈ ಸಂಬಂಧ ಕೆ.ಎಸ್.ಆರ್.ಪಿ ಪಡೆ ಸ್ಥಾಪಿಸುವ ಬಗ್ಗೆ ಕ್ರಮ ಕೈಗೊಳ್ಳಬೇಕೆಂದು ಸದನದಲ್ಲಿ ಕೋರಿದರು.

ಈ ಸಮಯದಲ್ಲಿ ಉತ್ತರಿಸಿದ ಸಚಿವರು, ರಾಯಚೂರು ಭಾಗದ 30 ಶಾಸಕರು ಸಹಿ ಮಾಡಿ ರಾಯಚೂರು ಭಾಗಕ್ಕೆ ಕೆ.ಎಸ್.ಆರ್.ಪಿ ಪಡೆ ಸ್ಥಾಪಿಸುವಂತೆ ಮನವಿ ಸಲ್ಲಿಸಿರುತ್ತಾರೆ. ಈಗಾಗಲೇ ಬೆಂಗಳೂರು ಸೇ- ರಿದಂತೆ ರಾಜ್ಯದಲ್ಲಿ 12 ಕೆ.ಎಸ್.ಆರ್.ಪಿ ಪಡೆಗಳು ಕಾರ್ಯನಿರ್ವಹಿಸುತ್ತಿವೆ. ಎಂದು ತಿಳಿಸಿದರು. ರಾಯಚೂರು ಭಾಗದಲ್ಲಿ ವಿಶ್ವಪ್ರಸಿದ್ದ ಧಾರ್ಮಿಕ ಕ್ಷೇತ್ರಗಳು, ಅಣೆಕಟ್ಟುಗಳು, ಗಡಿಭಾಗಗಳು ಇರುವುದರಿಂದ ಈ ಕು- ರಿತು ಪರಿಶೀಲಿಸಿ, ಶಾಸಕರುಗಳ ಮನವಿಯನ್ನಾಧರಿಸಿ ಆರ್ಥಿಕ ಇಲಾಖೆಗೆ ಈಗಾಗಲೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆ. ಅಗತ್ಯತೆ ಅನುಸಾರ ಆರ್ಥಿಕ ಇಲಾಖೆ ಅನುಮೋದನೆ ಪಡೆದು ಕೆ.ಎಸ್.ಆರ್.ಪಿ ಪಡೆ ಸ್ಥಾಪನೆ ಬಗ್ಗೆ ಕ್ರಮ ವಹಿಸಲಾಗುವುದು ಎಂದು ಗೃಹಸಚಿವರು ತಿಳಿಸಿದರು.

## ಕವಿತಾಳ-ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಸಕಲ ಸಿದ್ದತೆ

ನೈಜ್ಯ ದೆಸೆ ನ್ಯೂಸ್



**ಕವಿತಾಳ: ಮಾರ್ಚ್ 18 ರಿಂದ ಆರಂಭವಾಗಲಿರುವ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಶಿಕ್ಷಕರು ಪರೀಕ್ಷಾ ಕೇಂದ್ರದಲ್ಲಿ ಪೂರಕವಾಗಿ ಸಕಲ ಸಿದ್ದತೆಗಳನ್ನು ಮಾಡಿಕೊಳ್ಳಲಾಯಿತು.**

ಪಟ್ಟಣದಲ್ಲಿ ಒಟ್ಟು ಮೂರು ಕೇಂದ್ರಗಳಲ್ಲಿ ಪರೀಕ್ಷೆ ನಡೆಯಲಿದ್ದು ಕರ್ನಾಟಕ ಪಬ್ಲಿಕ್ ಶಾಲೆ (ಪ್ರೌಢಶಾಲಾ) ವಿಭಾಗ ಕೇಂದ್ರ, ಬಾಲಕೀಯರ ಸರ್ಕಾರಿ ಪ್ರೌಢಶಾಲಾ ಕೇಂದ್ರ ಹಾಗೂ ನವಚೇತನ ಶಾಲೆಯ ಪರೀಕ್ಷಾ ಕೇಂದ್ರದ ಎಲ್ಲಾ ಕೊಠಡಿಗಳಲ್ಲಿನ ವಿದ್ಯುತ್ ಬಲ್ಬ್, ಫ್ಯಾನ್‌ಗಳ, ಎಲ್ಲಾ ಕೊಠಡಿಗಳಿಗೆ ಮತ್ತು ಆವರಣದಲ್ಲಿ ಸಿಸಿ ಕ್ಯಾಮರಾ ಅಳವಡಿಕೆ, ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯಗಳ ವ್ಯವಸ್ಥೆಯನ್ನು ಪರಿಶೀಲಿಸಿಕೊಳ್ಳಲಾಯಿತು.

ಕರ್ನಾಟಕ ಪಬ್ಲಿಕ್ ಶಾಲೆಯ ಪರೀಕ್ಷಾ ಕೇಂದ್ರದ ಪರೀಕ್ಷೆ ಸಹಾಯಕರಾದ ಸಿದ್ರಾಮೇಶ್ ಅವರು ಕೊಠಡಿ ಮೇಲ್ವಿಚಾರಕರಿಗೆ ಪರೀಕ್ಷಾ ಕೇಂದ್ರದ ನಿಯಮಗಳನ್ನು ಮತ್ತು ಕೇಂದ್ರದಲ್ಲಿ ಅನುಸರಿಸಬೇಕಾದ ಕ್ರಮಗಳ ಕು- ರಿತು ಸವಿವರವಾಗಿ ತಿಳಿಸಿದರು. ಈ ಸಂದರ್ಭದಲ್ಲಿ ಕೇಂದ್ರ ಮುಖ್ಯ ಅಧೀಕ್ಷಕಿ ಮಂಜುಳಾ ಅಂಗಡಿ, ಶ್ರೀನಿವಾಸ ಸೇ- ರಿದಂತೆ ಪರೀಕ್ಷಾ ಕೇಂದ್ರದ ನಿಯೋಜಿತ ಕೊಠಡಿ ಮೇಲ್ವಿಚಾರಕರು ಉಪಸ್ಥಿತರಿದ್ದರು.

## ಸ್ವಪಕ್ಷದ ಮುಖಂಡನ ವಿರುದ್ಧವೇ ದೂರು ನ್ಯಾಯಕ್ಕಾಗಿ ಪ್ರಧಾನಿ ಮೋದಿ ಕಚೇರಿ ಕದ ತಟ್ಟಿದ ಕಾಂಗ್ರೆಸ್ ನಾಯಕಿ

ನೈಜ್ಯ ದೆಸೆ ನ್ಯೂಸ್



**ಚಿಕ್ಕಮಗಳೂರು: ಸ್ವಪಕ್ಷದ ಮುಖಂಡನ ವಿರುದ್ಧ ಹಲ್ಲೆ ಆರೋಪ ಹೊರಿಸಿರುವ ಕಾಂಗ್ರೆಸ್ ನಾಯಕಿಯೊಬ್ಬರು ನ್ಯಾಯಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಅವರ ಕಚೇರಿ ಕದ ತಟ್ಟಿದ್ದಾರೆ.**

ಚಿಕ್ಕಮಗಳೂರು ನಗರದ ಕಾಂಗ್ರೆಸ್ ನಾಯಕಿ ಚೇತನಾ ಎಂಬವರು ಯೂತ್ ಕಾಂಗ್ರೆಸ್ ಮಾಜಿ ಜಿಲ್ಲಾಧ್ಯಕ್ಷ ರಾಹಿಲ್ ಷ- ರೀಫ್ ವಿರುದ್ಧ ದೂರು ನೀಡಿದ್ದಾರೆ. ಚೇತನಾ ಮನೆ ಬಳಿ ಹೋಗಿ ರಾಹಿಲ್ ಮಚ್ಚಿನಿಂದ ಹಲ್ಲೆ ಮಾಡಿದ ಆರೋಪ ಕೇಳಿಬಂದಿದೆ. ಚೇತನಾ ಅವರ ಗಂಡನ ಕೈಗೆ ಗಾಯವಾಗಿ, ಮಹಿಳಾ ಠಾಣೆಯಲ್ಲಿ ದೂರು ದಾಖಲಾಗಿದೆ. ರಾಹಿಲ್ ಷರೀಫ್ ಅಪಾರ್ಟ್ಮೆಂಟ್‌ನಲ್ಲಿ ಮಹಿಳೆ ಜೊತೆಗಿದ್ದ ಫೋಟೋ ವೈರಲ್ ಆಗಿತ್ತು. ಆ ಅಪಾರ್ಟ್ಮೆಂಟ್ ಚೇತನಾ ಅವರದ್ದಾಗಿದ್ದು, ಇದೇ ಷರೀಫ್‌ನಿಂದ ಬಾಡಿಗೆ ಪಡೆದು ನಡೆಸುತ್ತಿದ್ದರು.

ಹಿಂದೂ ಮಹಿಳೆ ಜೊತೆ ಅದೇ ಅಪಾರ್ಟ್ಮೆಂಟ್‌ನಲ್ಲಿದ್ದ ಫೋಟೋ ವೈರಲ್ ಆಗಿತ್ತು. ಚೇತನಾ ಅವರೇ ಫೋಟೋ ವೈರಲ್ ಮಾಡಿರೋದು ಎಂದು ಮನೆ ಬಳಿ ಹೋಗಿ ಮಚ್ಚು ಬೀಸಿದ್ದ. ಈ ಸಂಬಂಧ ದೂರು ನೀಡಿದರೂ ಕ್ರಮವಿಲ್ಲ ಎಂದು ಇದೀಗ ನ್ಯಾಯಕ್ಕಾಗಿ ಪ್ರಧಾನಿಗೆ ಪತ್ರ ಪತ್ರ ಬರೆದಿದ್ದಾರೆ. ಪ್ರಧಾನಿ ಮೋದಿ, ಕೇಂದ್ರ ಸಚಿವಾಲಯ, ರಾಜ್ಯ ಪೊಲೀಸ್ ಮಹಾನಿರ್ದೇಶಕರು ಸೇರಿ ಹಲವರಿಗೆ ಕಾಂಗ್ರೆಸ್ ನಾಯಕಿ ಪತ್ರ ಬರೆದು ನ್ಯಾಯ ಕೋರಿದ್ದಾರೆ. ಆತನ ಮೊಬೈಲ್‌ನಲ್ಲಿ ಹಿಂದೂ ಹೆಣ್ಣುಮಕ್ಕಳ ಜೊತೆಗಿರುವ ಫೋಟೋಗಳಿವೆ.

ಹೆಣ್ಣುಮಕ್ಕಳ ಫೋಟೋಗಳನ್ನ ಇಟ್ಟುಕೊಂಡು ಬ್ಲ್ಯಾಕ್‌ಮೇಲ್ ಮಾಡುತ್ತಾನೆ ಎಂದು ದೂರಿದ್ದಾರೆ. ಆತ ಎಲ್ಲರಿಂದ ರಕ್ಷಣೆಗೆ ಒಳಗಾಗಿದ್ದಾನೆ. ಯಾವುದೇ ಕ್ರಮವಾಗುತ್ತಿಲ್ಲ. ತಿಂಗಳ ಅಂತರದಲ್ಲಿ 2 ಗಲಾಟೆ ಮಾಡಿಕೊಂಡಿದ್ದ ರಾಹಿಲ್. 2 ಗಲಾಟೆ ಹಿಂದೂಗಳ ಮನೆಯಲ್ಲೇ ಆಗಿದೆ. ಸದ್ಯ ಈ ಎಲ್ಲಾ ಬೆಳವಣಿಗೆ ಮಧ್ಯೆ ರಾಹಿಲ್ ಷರೀಫ್ ಕಾಂಗ್ರೆಸ್ಸಿನಿಂದ ಉಚ್ಚಾಟನೆ ಆಗಿದ್ದಾನೆ.

## ವಿದ್ಯಾರ್ಥಿಗಳು ಶಿಸ್ತು, ಸಮಯಪ್ರಜ್ಞೆ ಬೆಳೆಸಿಕೊಳ್ಳಲಿ: ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಸ್ವಾಮೀಜಿ

ನೈಜ್ಯ ದೆಸೆ ನ್ಯೂಸ್





**ಮಾನ್ವಿ: ವಿದ್ಯಾರ್ಥಿಗಳು ಶಿಸ್ತು ಹಾಗೂ ಸಮಯಪ್ರಜ್ಞೆ ಬೆಳೆಸಿಕೊಂಡು ಸಮಾಜದಲ್ಲಿ ಉತ್ತಮ ಪ್ರಜೆಗಳಾಗಿ ರೂಪುಗೊಳ್ಳಬೇಕು ಎಂದು ಕಲ್ಮಠ ವಿದ್ಯಾಸಂಸ್ಥೆಯ ಅಧ್ಯಕ್ಷರಾದ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.**

ಅವರು ಪಟ್ಟಣದ ಕಲ್ಮಠ ಪ್ರಾಥ- ‍ಮಿಕ ಶಾಲೆಯಲ್ಲಿ ಆಯೋಜಿಸಿದ್ದ ಲಿಂ. ಡಾ. ಶಿವಮೂರ್ತಿ ಶಿವಾಚಾರ್ಯ ಮಹಾಸ್ವಾಮಿಗಳವರ ಮೂರನೇ ಪುಣ್ಯಾರಾಧನೆ, ಏಳನೇ ತರಗತಿ ವಿದ್ಯಾರ್ಥಿಗಳ ಬಿಳ್ಕೊಡುಗೆ ಸಮಾರಂಭ ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಕಲ್ಮಠ ಶ್ರೀ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು. ಗುರುಗಳವರು ಸದಾ ಸಮಯ ಪಾಲನೆಗೆ ಮಹತ್ವ ನೀಡುತ್ತಿದ್ದರು. ಶಿಕ್ಷಕರು ಹಾಗೂ ವಿದ್ಯಾರ್ಥಿಗಳು ಸಮಯಪ್ರಜ್ಞೆಯನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳುತ್ತಿದ್ದರು ಎಂದು ಪೂಜ್ಯರ ವ್ಯಕ್ತಿತ್ವವನ್ನು ಸ್ಮರಿಸಿದರು. ಕಲ್ಮಠ ವಿದ್ಯಾಸಂಸ್ಥೆಯ ಹಳೆಯ ವಿದ್ಯಾರ್ಥಿ ಹಾಗೂ ಸರ್ವೋದಯ ಕ್ಷಣ ಸಂಸ್ಥೆಯ ಆಡಳಿತಾಧಿಕಾರಿ ದತ್ತಾತ್ರೇಯ ಮೇಟಿ ಕಾರ್ಯಕ್ರಮ ಉದ್ಘಾಟಿಸಿ, ಮಾನವಿ ತಾಲೂಕಿನ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗಲೆಂದು ಗುರುಗಳು ಸಂಸ್ಥೆಯನ್ನು ಸ್ಥಾಪಿಸಿದ್ದರು ಎಂದು ಹೇಳಿದರು. ವಿದ್ಯಾರ್ಥಿಗಳು ಸದಾ ಓದಿನಲ್ಲಿ ತೊಡಗಿಸಿಕೊಂಡು ಕ್ರಿಯಾಶೀಲರಾಗಿರಬೇಕು ಎಂದು ಪ್ರೋತ್ಸಾಹ ನೀಡಿದರು. ಕಾರ್ಯಕ್ರಮದಲ್ಲಿ ಶಿಕ್ಷಣ ಸಂಯೋಜಕಿ ರಾಚಮ್ಮ ಮಾತನಾಡಿ, ವಿದ್ಯಾರ್ಥಿಗಳು ಉತ್ತಮವಾಗಿ ಅಧ್ಯಯನ ಮಾಡಿ ಹೆಚ್ಚು ಅಂಕ ಗಳಿಸಿ ಶಾಲೆಗೆ ಕೀರ್ತಿ ತರಬೇಕು ಎಂದು ತಿಳಿಸಿದರು. ಕಾವೇರಿ ಬಸವರಾಜ್, ಕೃಷ್ಣ ವೆಂಕಟೇಶ್ ಹಾಗೂ ಮನೋಹರ ವೀರಭದ್ರಪ್ಪ ಅವರಿಗೆ “ಕಲ್ಮಠ ಶ್ರೀ ವಿದ್ಯಾರತ್ನ ಪ್ರಶಸ್ತಿ” ಪ್ರಧಾನ ಮಾಡಲಾಯಿತು. ಕಾರ್ಯಕ್ರಮದಲ್ಲಿ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯ ಮಂಜುನಾಥ ಕಮತರ ಅಧ್ಯಕ್ಷತೆ ವಹಿಸಿದ್ದರು.

ಪದವಿ ಪೂರ್ವ ಕಾಲೇಜಿನ ಪ್ರಾಚಾರ್ಯ ಎಸ್.ಎಸ್. ಪಾಟೀಲ್, ಪದವಿ ಕಾಲೇಜಿನ ಪ್ರಾಚಾರ್ಯ ಸಿದ್ದನಗೌಡ ಪಾಟೀಲ್, ಪ್ರೌಢಶಾಲೆ ಮುಖ್ಯೋಪಾಧ್ಯಾಯ ಪ್ರಭಯ್ಯಸ್ವಾಮಿ ವೇದಿಕೆಯಲ್ಲಿ ಉಪಸ್ಥಿತರಿದ್ದರು. ಪ್ರೌಢಶಾಲಾ ಶಿಕ್ಷಕ ಎಂ.ಎಂ. ಹಿರೇಮಠ್ “ಕಲ್ಮಠ ಶ್ರೀಗಳ ಜೀವನ ಮತ್ತು ಸಾಧನೆ” ಕುರಿತು ಉಪನ್ಯಾಸ ನೀಡಿದರು. ಕೆಮ್ಯಾನಾಯ್ಕ ಪ್ರಾಸ್ತಾವಿಕವಾಗಿ ಮಾತನಾಡಿದರು. ರೂಪ ಕಾರ್ಯಕ್ರಮ ನಿರೂಪಿಸಿದರು. ರವಿ ಹುಲಿಯಾಪುರ ಸ್ವಾಗತಿಸಿದರು. ರಿಜ್ವಾನ ಬೇಗಂ ವಂದಿಸಿದರು. ಮಹಾಂತಮ್ಮ, ಜಯಶ್ರೀ, ಸೌಮ್ಯ, ಪವಿತ್ರ, ಬ್ರಮರಾಂಭ, ಗೌರಮ್ಮ ಸೇರಿದಂತೆ ಇನ್ನಿತರರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಸಾಹಿತ್ಯ ಸಿಂಚನ

ಸೂಜಿಗಲ್ಲು..!

ನಕ್ಕಿದ್ದು...
ಕಿರುನಗೆ ಲಾಸ್ಯಕ್ಕಲ್ಲ
ಕೋಲ್ಮಿಂಚ ಭಾಷ್ಯಕ್ಕೆ.!

ಬಂದಿದ್ದು...
ಅಧರದ ಕರೆಗಲ್ಲ
ಕಣ್ಣಂಚಿನ ಮೊರೆಗೆ.!

ನಿಂದಿದ್ದು...
ಆದರ ಮಾಧುರ್ಯಕ್ಕಲ್ಲ
ಅಂತಃಕರಣ ಔದಾರ್ಯಕ್ಕೆ.!

ಬಾಗಿದ್ದು...
ಚತುರತೆ ಚೈತನ್ಯಕ್ಕಲ್ಲ
ಮಮತೆ ಕಾರುಣ್ಯಕ್ಕೆ.!

ಸೋತಿದ್ದು...
ಪ್ರಖರ ತೇಜಸ್ಸಿಗಲ್ಲ
ಪ್ರಾಂಜಲ ಮನಸ್ಸಿಗೆ.!

ಶರಣಾಗಿದ್ದು...
ನುಡಿಯ ಬೆರಗಿಗಲ್ಲ
ಮೌನದ ಮೆರುಗಿಗೆ.!

ಕರಗಿದ್ದು...
ಸುರಿವ ಕಂಬನಿಗಲ್ಲ
ಸ್ಫುರಿವ ಕಕ್ಕುಲತೆಖನಿಗೆ.!

ಕಂಪಿಸಿದ್ದು...
ಸಾಧನೆ ಯಶಸ್ಸಿಗಲ್ಲ
ಅಂತಃಶಕ್ತಿ ತೇಜಸ್ಸಿಗೆ.!

ಆರಾಧಿಸಿದ್ದು...
ಒಲವಿನ ತತ್ವಕ್ಕಲ್ಲ
ನಿಲುವಿನ ಸತ್ಯಸತ್ವಕ್ಕೆ.!

ಮಾರುಹೋದದ್ದು...
ಅನನ್ಯ ಸೌಂದರ್ಯಕ್ಕಲ್ಲ
ಅಪೂರ್ವ ಆಂತರ್ಯಕ್ಕೆ.!

ಎ.ಎನ್.ರಮೇಶ್. ಗುಬ್ಬಿ.

# ಹೋಲಿ ಫ್ಯಾಮಿಲಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಪುಟಾಣಿಗಳಿಗೆ ಅದ್ದೂರಿ 'ಪದವಿ ಪ್ರದಾನ' ಸಮಾರಂಭ

ನೈಜ್ಯ ದೆಸೆ ನ್ಯೂಸ್

ಸಿಂಧನೂರು: ನಗರದ ಹೃದಯಭಾಗದಲ್ಲಿರುವ ಹಳೆಯ ಹೋಲಿ ಫ್ಯಾಮಿಲಿ ಆಂಗ್ಲ ಮಾಧ್ಯಮ ಶಾಲೆಯಲ್ಲಿ ಸೋಮವಾರ (ಮಾ. 16) ಯು.ಕೆ.ಜಿ. ವಿದ್ಯಾರ್ಥಿಗಳಿಗೆ 'ಪದವಿ ಪ್ರದಾನ (Graduation Day)' ಕಾರ್ಯಕ್ರಮವನ್ನು ಅತ್ಯಂತ ಸಡಗರ ಮತ್ತು ಸಂಭ್ರಮದಿಂದ ಆಯೋಜಿಸಲಾಯಿತು.

ನರ್ಸರಿಯಿಂದ ಯು.ಕೆ.ಜಿ. ವರೆಗಿನ ಆರಂಭಿಕ ಶಿಕ್ಷಣವನ್ನು ಪೂರ್ಣಗೊಳಿಸಿ, ಪ್ರಥಮ ತರಗತಿಗೆ ಪ್ರವೇಶ ಪಡೆಯುತ್ತಿರುವ ಪುಟಾಣಿ ಮಕ್ಕಳಲ್ಲಿ ಆತ್ಮವಿಶ್ವಾಸ ಹಾಗೂ ಕಲಿಕೆಯ ಉತ್ಸಾಹವನ್ನು ಇಮ್ಮಡಿಗೊಳಿಸುವ ಸದುದ್ದೇಶದಿಂದ ಈ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ವಿಶೇಷವಾಗಿ ಸಿದ್ಧಪಡಿಸಿದ ಗೌರವಾನ್ವಿತ ಪದವಿ ವೇಷಭೂಷಣಗಳನ್ನು (Graduation Robes) ಧರಿಸಿದ್ದ ಮಕ್ಕಳು ಭವಿಷ್ಯದ ವಿದ್ಯಾಭ್ಯಾಸದತ್ತ ಅತ್ಯುತ್ಸಾಹದಿಂದ ಹೆಜ್ಜೆ ಹಾಕಿದರು.

ಗಣ್ಯರ ಉಪಸ್ಥಿತಿ ಮತ್ತು ನುಡಿಮುತ್ತುಗಳು: ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ



ಭಾಗವಹಿಸಿದ್ದ ಶಿಕ್ಷಣಪ್ರೇಮಿ, ಹಿರಿಯ ಪತ್ರಕರ್ತ ಹಾಗೂ ದಲಿತಪರ ಸಾಮಾಜಿಕ ಹೋರಾಟಗಾರರಾದ ಡಿ.ಹೆಚ್. ಕಂಬಳೆ ಅವರು ಮಕ್ಕಳೊಂದಿಗೆ ಬೆರೆತು, ಆತ್ಮೀಯವಾಗಿ ಸಂಭಾಷಣೆ ನಡೆಸುವ ಮೂಲಕ ಅವರಲ್ಲಿ ವಿಶ್ವಾಸ ಮತ್ತು ಉತ್ಸಾಹ ತುಂಬುವ ಸಂದೇಶವನ್ನು ನೀಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಲೆಯ ವ್ಯವಸ್ಥಾಪಕರಾದ ವಂ. ಫಾದರ್ ಜ್ಞಾನಪ್ರಕಾಶಂ ಅವರು, "ಇಂತಹ ಕಾರ್ಯಕ್ರಮಗಳು ಮಕ್ಕಳ ಭವಿಷ್ಯದಲ್ಲಿ ಹೊಸ ಬೆಳಕು ಮತ್ತು ಉತ್ಸಾಹವನ್ನು ಮೂಡಿಸುತ್ತವೆ. ಸಾಮಾಜಿಕ ನ್ಯಾಯಕ್ಕಾಗಿ ನಿರಂತರವಾಗಿ ಶ್ರಮಿಸುತ್ತಿರುವ ಡಿ.ಹೆಚ್. ಕಂಬಳೆ ಅವರು ಇಂದು ಮುಖ್ಯ ಅತಿಥಿಗಳಾಗಿ ಆಗಮಿಸಿರುವುದು ನಮಗೆ ಗೌರವದ ವಿಷಯ. ದೇವರ ಸ್ವರೂಪವಾಗಿರುವ ಈ ಮಕ್ಕಳಿಗೆ ಅವರ ಕೈಯಿಂದ ಪದವಿ ಪ್ರಮಾಣ ಪತ್ರ ವಿತರಣೆ ಮಾಡಿರುವುದು ಕಾರ್ಯಕ್ರಮವನ್ನು ಮತ್ತಷ್ಟು ಅರ್ಥಪೂರ್ಣಗೊಳಿಸಿದೆ," ಎಂದು ಹರ್ಷ ವ್ಯಕ್ತಪಡಿಸಿದರು.

ವೇದಿಕೆಯಲ್ಲಿ ಉಪಸ್ಥಿತರಿದ್ದ ಗಣ್ಯರು:



*ವಂ. ಫಾದರ್ ಜ್ಞಾನಪ್ರಕಾಶಂ (ವ್ಯವಸ್ಥಾಪಕರು, ಹೋಲಿ ಫ್ಯಾಮಿಲಿ ಶಾಲೆ)
*ಡಿ.ಹೆಚ್. ಕಂಬಳೆ (ಮುಖ್ಯ ಅತಿಥಿಗಳು ಹಾಗೂ ಹಿರಿಯ ಪತ್ರಕರ್ತರು)
*ಹೆಚ್. ಮರಿಯಪ್ಪ ಹೆಡಗಿಬಾಳ (ವಿಶೇಷ ಅತಿಥಿಗಳು ಹಾಗೂ ವಕೀಲರು)
*ಸಿಸ್ಟರ್ ಸುಲೋಚನ (ಮುಖ್ಯ ಶಿಕ್ಷಕಿ)

ಕಾರ್ಯಕ್ರಮದಲ್ಲಿ ಶಾಲೆಯ ಶಿಕ್ಷಕ ವೃಂದ, ಬೋಧಕೇತರ ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳ ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ಅತ್ಯುತ್ಸಾಹದಿಂದ ಪಾಲ್ಗೊಂಡು ಪುಟಾಣಿಗಳ ಸಂಭ್ರಮಕ್ಕೆ ಸಾಕ್ಷಿಯಾದರು.

# ಏಪ್ರಿಲ್ ಕೊನೆಯವರೆಗೂ ಕಾಲುವೆಗೆ ನಿರಂತರ ನೀರು ಹರಿಸಲು ಹಸಿರು ಸೇನೆ ಒತ್ತಾಯ




ನೈಜ್ಯ ದೆಸೆ ನ್ಯೂಸ್

ಲಿಂಗಸಗೂರು: ಕಳೆದ ವರ್ಷ ರಾಜ್ಯಾದ್ಯಂತ ವಾಡಿಕೆಯಿಗಿಂತ ಮಳೆಯಾಗಿದ್ದು, ಹೆಚ್ಚು ಎಲ್ಲಾ ಜಲಾಶಯಗಳು ಭರ್ತಿಯಾಗಿವೆ. ವಿಶೇಷವಾಗಿ ನಾರಾಯಣಪೂರ ಜಲಾಶಯದಲ್ಲಿ ಸಾಕಷ್ಟು ನೀರು ಸಂಗ್ರಹವಿರುವ ಹಿನ್ನೆಲೆಯಲ್ಲಿ, ಬಲದಂಡೆ ಹಾಗೂ ರಾಂಪೂರು ಏತ ನೀರಾವರಿ ಕಾಲುವೆಗಳಿಗೆ ನಿರಂತರವಾಗಿ ನೀರು ಹರಿಸಲು ಕ್ರಮ ಕೈಗೊಳ್ಳಬೇಕೆಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಕಾರ್ಯಕರ್ತರು ಸಹಾಯಕ ಆಯುಕ್ತರಿಗೆ ಮನವಿ ಸಲ್ಲಿಸಿ ಒತ್ತಾಯಿಸಿದರು.

ಕಾಲುವೆಗಳಿಗೆ ನಿರಂತರವಾಗಿ ನೀರು ಹರಿಸಿದರೆ ರೈತರಿಗೆ ಬೆಳೆ ಬೆಳೆಯಲು ಹೆಚ್ಚಿನ ಅನುಕೂಲವಾಗುತ್ತದೆ. ಲಿಂಗಸಗೂರು ತಾಲೂಕಿನಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಮಸಾರಿ (ಕೆಂಪು) ಭೂಮಿ ಇರುವುದರಿಂದ, ಎಷ್ಟು ನೀರು ಹರಿಸಿದರೂ ಸಾಕಾಗುವುದಿಲ್ಲ. ಜೊತೆಗೆ ಹವಾಮಾನ ವೈಪರಿತ್ಯದಿಂದ ಮುಂಚಿತವಾಗಿ ಬಿತ್ತನೆ ಮಾಡಿದರೂ ಬೆಳೆ ಬೆಳವಣಿಗೆಗೆ ವಿಳಂಬವಾಗುತ್ತಿದೆ. ಕಾಲುವೆಗಳಿಗೆ ಏಪ್ರಿಲ್ ಕೊನೆಯ ವಾರದವರೆಗೆ ನಿರಂತರವಾಗಿ ನೀರು ಹರಿಸಿದರೆ ಮಾತ್ರ ರೈತರಿಗೆ ಉತ್ತಮ ಫಲ ದೊರೆಯಲಿದೆ. ಇಲ್ಲವಾದಲ್ಲಿ ಬೆಳೆ ನಾಶವಾಗಿ ರೈತರು ಆರ್ಥಿಕ ನಷ್ಟ ಅನುಭವಿಸ ಬೇಕಾಗುತ್ತದೆ. ಆದ್ದರಿಂದ ಬಲದಂಡೆ ಹಾಗೂ ರಾಂಪೂರು ಏತ ನೀರಾವರಿ ಕಾಲುವೆಗಳಿಗೆ ಏಪ್ರಿಲ್ ಕೊನೆಯ ವಾರದವರೆಗೆ ನಿರಂತರವಾಗಿ ನೀರು ಹರಿಸಲು ಸರ್ಕಾರ ಕ್ರಮ ಕೈಗೊಳ್ಳಬೇಕು.

ಇಲ್ಲವಾದಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದ್ದಾರೆ. ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಶಿವಪುತ್ರ ಗೌಡ ನಂದಿಹಾಳ, ತಾಲೂಕಾಧ್ಯಕ್ಷ ವೈ.ದುರ್ಗಾಪ್ರಸಾದ್, ಕಾರ್ಯಾಧ್ಯಕ್ಷ ಆನಂದ ಕುಂಬಾರ, ಹನುಮನಗೌಡ, ಬಸಣ್ಣ ಕೋಠ, ಬಸವರಾಜ್, ರಾಮಣ್ಣ, ಮಹಮ್ಮದ್ ಸಾಬ್, ಸೋಮರೆಡ್ಡಿ, ದುರಗಪ್ಪ, ಸದಾನಂದ, ಹನಮಂತ, ಹೊಳೆಪ್ಪ, ಮೌಲಾಸಾಬ್, ಮರಿಯಪ್ಪ, ತಿಪ್ಪಣ್ಣ, ಖಾದರಸಾಬ್, ನಾಗಪ್ಪ ಪುಣೆದ, ಹಣಮಂತರಾಯ, ಭೀಮಪ್ಪ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಬಿಲ್ ಪಾವತಿ ವಿಳಂಬ ಭೋಜನಾಲಯಕ್ಕೆ ಬೀಗ ಹಾಕಿದ ಗುತ್ತಿಗೆದಾರ, ವಿದ್ಯಾರ್ಥಿ ಗಳು ಬಯಲಿನಲಿ ಊಟ

ನೈಜ್ಯ ದೆಸೆ ನ್ಯೂಸ್

ಮಸ್ಕಿ: ತಾಲೂಕಿನ ಹಾಲಾಪೂರನ ಸರಕಾರಿ ಪ್ರೌಢಶಾಲೆಯಲ್ಲಿ 2021 – 22 ಸಾಲಿನ ನರೇಗಾ ಯೋಜನೆಯ ಅಡಿಯಲ್ಲಿ 12 ಲಕ್ಷ ರೂಪಾಯಿ ಮೊತ್ತದ ಭೋಜನಾಲಯ ಹಾಗೂ 6 ಲಕ್ಷ ರೂಪಾಯಿ ಮೊತ್ತದ ಹೈಟೆಕ್ ಶೌಚಾಲಯ ಕಾಮಗಾರಿ ಕೆಲಸ ಮುಗಿದು ಮೂರು ವರ್ಷ ಮುಗಿತಾ ಬಂದರು.

ಇನ್ನು ಯಾವುದೇ ಬಿಲ್ ಮಾಡಿಲ್ಲವೆಂದು ರವಿಕಾಂತ ದೇಸಾಯಿ ಮತ್ತು ಅಮರೇಶ ಶಂಕರನಗರಕ್ಯಾಂಪ ಭೋಜನಾಲಯಕ್ಕೆ ಬೀಗ ಹಾಕಿದ ಘಟನೆ ಜರುಗಿದ್ದು ವಿದ್ಯಾರ್ಥಿಗಳು ಬಯಲಿನಲಿ ಊಟ ಮಾಡುವ ಪ್ರಸಂಗ ಬಂತು ಗುತ್ತಿಗೆದಾರರು ಪಿಡಿಒ ವಿಶ್ವನಾಥ ಹೂಗಾರ, ತಾಲೂಕ ಪಂಚಾಯತಿ ಇಒ ಅಮರೇಶ ಅವರಿಗೆ ಹತ್ತಾರು ಸಾರಿ ಹೇಳಿದರು



ಮನವಿ ಮಾಡಿದರು ಇದುವರೆಗೂ ಒಂದು ರೂಪಾಯಿ ಬಿಲ್ಲು ಮಾಡಿಲ್ಲವೆಂದು ಇಂದು ಭೋಜನಾಲಯಕ್ಕೆ ಬೀಗ ಹಾಕಿ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಭೋಜನಾಲಯಕ್ಕೆ ಬೀಗ ಹಾಕಿರುವುದರಿಂದ ವಿದ್ಯಾರ್ಥಿ ಗಳು ಬಯಲಿನಲ್ಲಿಯೆ ಊಟ ಮಾಡಿದರು.

ಈ ಸಮಸ್ಯೆಯ ಕುರಿತು ಸ್ವತಃ ನೋವನ್ನು ಹಂಚಿಕೊಂಡಿದ್ದು ಸಾಕ್ಷಿಯಾಗಿದ್ದು ತೀವ್ರ ನಾಚಿಕೆಯ ಸಂಗತಿಯಾಗಿದೆ ಎಂದು ಗ್ರಾಮಸ್ಥರು ತೀವ್ರವಾಗಿ ಖಂಡಿಸಿದರು. ಈ ಬಗ್ಗೆ ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರವಿಕಾಂತ್ ದೇಸಾಯಿ ಮಾತನಾಡಿ ಪಿಡಿಒ ವಿಶ್ವನಾಥ ಹೂಗಾರ ಅವರಿಗೆ ಮತ್ತು ತಾಲೂಕು ಪಂಚಾಯತಿ ಇಒ ಅವರಿಗೆ ಬಿಲ್ ಕುರಿತು ನೂರು ಸಲ ಗಮನಕ್ಕೆ ತಂದರು ಕಿಂಚತ್ತು ಕಾಳಜಿ ವಹಿಸಲಿಲ್ಲ ನಾವು ಸಾಲ ಮಾಡಿ ಕೆಲಸ ಮಾಡಿಸಿದ್ದೇವೆ ಈಗ ಏನು ಮಾಡಬೇಕು ಎಂಬ ನೋವನ್ನು ಹೇಳಿದರು.

ಹಾಗೆ ತಾಲೂಕು ಪಂಚಾಯತಿ ಉದ್ಯೋಗ ಖಾತ್ರಿ ಸಹಾಯಕ ನಿರ್ದೇಶಕ ಶಿವಾನಂದ ರೆಡ್ಡಿ ಮಾತನಾಡಿ ಈ ಎರಡು ಕಾಮಗಾರಿಗಳು ಉತ್ತಮವಾಗಿ ಕೆಲಸ ಮಾಡಿದ್ದಾರೆ ಈ ಬಗ್ಗೆ ಪಿಡಿಒ ಅವರಿಗೆ ದಾಖಲೆಗಳನ್ನು ಕೊಡಿ ಎಂದು ಸ್ವತ ನಾನೇ ಹೇಳಿದ್ದು ಆದ'ರೆ ಪಿಡಿಓ ನಿರ್ಲಕ್ಷ ಮಾಡುತ್ತಿದ್ದಾರೆ ಎಂದರು ಈ ಸಂದರ್ಭದಲ್ಲಿ ಗ್ರಾಮಸ್ಥರಾದ ಉಮೇಶ ದೊಡ್ಡಮನಿ, ವೀರನಗೌಡ ಮಾಲಿಪಾಟೀಲ್, ಅಮರೇಶ್ ಮಲ್ಲಟ, ಚಂದಪ್ಪ ಬೋವಿ, ಲಕ್ಷ್ಮಣ್ ನಾಯಕ ಇನ್ನಿತರ ಇದ್ದರು.

## ಎಸ್ ಎಸ್ ಎಲ್ ಸಿ ಪರೀಕ್ಷಾ ಕೇಂದ್ರ ವೀಕ್ಷಿಸಿದ ತಹಸೀಲ್ದಾರು

ನೈಜ್ಯ ದೆಸೆ ನ್ಯೂಸ್

ಹಾಲಾಪೂರ: ಗ್ರಾಮದಲ್ಲಿರುವ ಸರಕಾರಿ ಪ್ರೌಢಶಾಲೆಯಲ್ಲಿ ಎಸ್ ಎಸ್ ಎಲ್ ಸಿ ಪರೀಕ್ಷಾ ಕೇಂದ್ರಕ್ಕೆ ಮಸ್ಕಿ ತಹಶೀಲ್ದಾರ ಮಂಜುನಾಥ ಭೊಗವತಿ ಭೇಟಿ ನೀಡಿ ಪರಿಶೀಲಿಸಿದರು. ಪರೀಕ್ಷಾ ನಡೆಯುವ ಎಲ್ಲಾ ಕೊಠಡಿಗಳನ್ನು, ಸಿಸಿ ಕ್ಯಾಮೆರಾ ಇನ್ನಿತರ ವೀಕ್ಷಿಸಿ ನಂತರ ಮಾತನಾಡಿ ಪರೀಕ್ಷೆಯು ಎಲ್ಲಾ ರೀತಿಯಿಂದ ಸುಸೂತ್ರವಾಗಿ ನಡೆಯಬೇಕು.



ಮುಖ್ಯವಾಗಿ ವಿದ್ಯಾರ್ಥಿಗಳಿಗೆ ಯಾವುದೇ ರೀತಿಯ ತೊಂದರೆ ಆಗದಂತೆ ಮುನ್ನೆಚ್ಚರಿಕೆ ಕ್ರಮವಹಿಸಿ ವಿದ್ಯಾರ್ಥಿಗಳು ಪರೀಕ್ಷೆಯನ್ನು ಯಾವುದೇ ಭಯ ತೊಂದರೆ ಒಳಪಡದೆ ನಿರ್ಭೀತಿಯಿಂದ ಪರೀಕ್ಷೆಯನ್ನು ಎದುರಿಸಬೇಕೆಂದು ಹೇಳಿದರು. ಈ ವೇಳೆಯಲ್ಲಿ ಮುಖ್ಯಗುರು ಸುಭಾಷ್ ಸಿಂಗ್ ಹಜಾರೆ, ಗ್ರಾಮ ಲೆಕ್ಕಾಧಿಕಾರಿಗಳಾದ ಕೃಷ್ಣಪ್ಪ, ಮಹಾಂತೇಶ ಹಾಗೂ ಶಾಲೆಯ ಶಿಕ್ಷಕ ವೃಂದ, ಗ್ರಾಮಸ್ಥರು ಇದ್ದರು.

## ಗ್ಯಾಸ್ ಅಭಾವ :ವೆಲ್ಡಿಂಗ್ ಉದ್ಯಮ ಬಂದ್

ನೈಜ್ಯ ದೆಸೆ ನ್ಯೂಸ್

ಬೆಂಗಳೂರು: ಮಧ್ಯಪ್ರಾಚ್ಯ ರಾಷ್ಟ್ರಗಳಲ್ಲಿ ಉಂಟಾಗಿರುವ ಯುದ್ಧ ಭೀತಿ ಪರಿಣಾಮ ಇದೀಗ ಗ್ಯಾಸ್ ಸಿಲಿಂಡರ್ ಮೇಲೆ ಸಂಪೂರ್ಣ ಅವಲಂಬಿತವಾಗಿರುವ ವೆಲ್ಡಿಂಗ್ ಅಂಗಡಿಗಳಿಗೂ ತಟ್ಟಿದೆ. ನಗರದ ಬಹುತೇಕ ವೆಲ್ಡಿಂಗ್ ಅಂಗಡಿಗಳು ಕಳೆದ ಸುಮಾರು 10 ದಿನಗಳಿಂದ ಗ್ಯಾಸ್ ಸಿಲಿಂಡರ್ ಸಿಗದೆ ಬಂದ್ ಮಾಡುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಹೋಟೆಲ್‌ಗಳಿಗೆ ಪರ್ಯಾಯವಾಗಿ ಸೌದೆ ಅಥವಾ ಎಲೆಕ್ಟ್ರಿಕ್ ಸ್ಟೋವ್ ಮೂಲಕ ಅಡುಗೆ ಮಾಡುವ ಅವಕಾಶ



ಇದ್ದರೂ, ವೆಲ್ಡಿಂಗ್ ಅಂಗಡಿಗಳಿಗೆ ಅಂತಹ ಪರ್ಯಾಯ ವ್ಯವಸ್ಥೆ ಇಲ್ಲದ ಕಾರಣ ಸಂಪೂರ್ಣವಾಗಿ ಕಾರ್ಯ ನಿಲ್ಲಿಸುವಂತಾಗಿದೆ.

ಮುಖ್ಯವಾಗಿ ಆಟೋ, ಕಾರು, ಲಾರಿ ಸೇರಿದಂತೆ ವಿವಿಧ ವಾಹನಗಳ ಬಿಡಿಭಾಗಗಳನ್ನು ಜೋಡಿಸಲು ವೆಲ್ಡಿಂಗ್ ಅತ್ಯಗತ್ಯವಾಗಿದೆ. ಅಪಘಾತಕ್ಕೊಳಗಾದ ವಾಹನಗಳ ಚಾಸಿಸ್, ಸ್ಟಿರಿಂಗ್ ರಾಡ್ ಸೇರಿದಂತೆ ಹಲವಾರು ಭಾಗಗಳ ಮರುಜೋಡಣೆಗೆ ಗ್ಯಾಸ್ ವೆಲ್ಡಿಂಗ್ ಅಗತ್ಯವಿದ್ದು, ಸಿಲಿಂಡರ್ ಕೊರತೆಯಿಂದ ಈ ಕೆಲಸಗಳು ಸ್ಥಗಿತಗೊಂಡಿವೆ. ಇನ್ನೂ ಹೊಸ ವಾಹನಗಳ ಬಾಡಿ ಬಿಲ್ ಡ ಗೆ ಗ್ಯಾಸ್ ಸಿಲಿಂಡರ್ ಅವಶ್ಯವಾಗಿ ಬೇಕಿದೆ.ಅದರೆನಗರದ ಕಲಾಸಿಪಾಳ್ಯ, ಶಿವಾಜಿನಗರ, ಗೌರಿಪಾಳ್ಯ ಸೇರಿದಂತೆ ಹಲವೆಡೆ ವೆಲ್ಡಿಂಗ್ ಅಂಗಡಿಗಳು ಮುಚ್ಚಿರುವುದರಿಂದ ಅಪಘಾತಗೊಂಡ ವಾಹನಗಳು ಗ್ಯಾರೇಜ್ ಮುಂದೆ ಸಾಲು ಸಾಲಾಗಿ ನಿಂತಿರುವ ದೃಶ್ಯ ಕಂಡು ಬರುತ್ತಿವೆ. ವಾಹನಗಳ ದುರಸ್ತಿ ಸಾಧ್ಯವಾಗದೆ ಮಾಲೀಕರು ಸಂಕಷ್ಟಕ್ಕೆ ಸಿಲುಕಿದ್ದಾರೆ.ಇತ್ತ ಗ್ಯಾಸ್ ಸಿಗದೆ ಅಂಗಡಿಗಳನ್ನು ಮುಚ್ಚಬೇಕಾದ ಪರಿಸ್ಥಿತಿ ಬಂದಿರುವುದರಿಂದ ವೆಲ್ಡಿಂಗ್ ಅಂಗಡಿ ಮಾಲೀಕರು ಆರ್ಥಿಕ ಸಂಕಷ್ಟ ಎದುರಿಸುತ್ತಿದ್ದಾರೆ. ಗ್ಯಾಸ್ ಸಿಲಿಂಡರ್ ಸಿಗದೆ ಕೆಲಸವೇ ಇಲ್ಲದಂತಾಗಿದೆ. ದಿನಗೂಲಿ ಮೇಲೆ ಬದುಕುವ ನಮಗೆ ಒಂದು ಹೊತ್ತಿನ ಊಟಕ್ಕೂ ಪರದಾಡುವ ಸ್ಥಿತಿ ಬಂದಿದೆ ಎಂದು ಅಂಗಡಿ ಮಾಲೀಕರು ತಮ ಅಳಲು ತೋಡಿಕೊಂಡಿದ್ದಾರೆ. ಗ್ಯಾಸ್ ಸರಬರಾಜು ಶೀಘ್ರದಲ್ಲೇ ಸರಿಯಾಗದಿದ್ದರೆ ವಾಹನ ದುರಸ್ತಿ ಉದ್ಯಮ ಸೇರಿದಂತೆ ಹಲವಾರು ಸಣ್ಣ ವ್ಯಾಪಾರಗಳ ಮೇಲೆ ಇನ್ನಷ್ಟು ಪರಿಣಾಮ ಬೀರುವ ಸಾಧ್ಯತೆ ಇದೆ.

## ವೃತ್ತಿ ಶಿಕ್ಷಣ ಪ್ರದರ್ಶನ, ಕೇರಿಯರ್ ಮೇಳಕ್ಕೆ ಜಿ.ಪಂ ಉಪ ಕಾರ್ಯದರ್ಶಿ ಚಾಲನೆ

# ಓದುವ ಅಭ್ಯಾಸ ರೂಪಿಸಿಕೊಳ್ಳಲು ವಿದ್ಯಾರ್ಥಿಗಳಿಗೆ ಸಲಹೆ

ನೈಜ್ಯ ದೆಸೆ ನ್ಯೂಸ್

ರಾಯಚೂರು: ವಿದ್ಯಾರ್ಥಿಗಳು ಸಾಮಾಜಿಕ ಜಾಲತಾಣಗಳ ಬಳಕೆ ಕಡಿಮೆ ಮಾಡಿ, ಉತ್ತಮವಾಗಿ ಓದುವ ಅಭ್ಯಾಸ ರೂಢಿಸಿಕೊಳ್ಳಬೇಕು ಎಂದು ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿಗಳಾದ ಹಾಲಸಿದ್ದಪ್ಪ ಪೂಜಾರಿ ಅವರು ಹೇಳಿದರು.

ಮಾರ್ಚ್ 17ರ ಮಂಗಳವಾರ ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದ್ದ 10ನೇ ತರಗತಿ, ಪಿಯುಸಿ ನಂತರ ವೃತ್ತಿ ಪ್ರಪಂಚದ ಅರಿವು ಮೂಡಿಸಲು ವೃತ್ತಿ ಶಿಕ್ಷಣ ಪ್ರದರ್ಶನ ಮತ್ತು ಕೆರಿಯರ್ ಮೇಳಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ವಿದ್ಯಾರ್ಥಿಗಳು ತಮ್ಮ ತಂದೆ– ತಾಯಿಯವರ ಕನಸುಗಳನ್ನು ಈಡೇರಿಸಬೇಕು. ವಿದ್ಯಾರ್ಥಿಗಳು ಕೌಶಲದ ಕಡೆ ಗಮನಹರಿಸಬೇಕು. ಎಐ ಬಗ್ಗೆ ವಿದ್ಯಾರ್ಥಿಗಳು ಸರಿಯಾಗಿ ತಿಳಿದುಕೊಳ್ಳಬೇಕು. ಹತ್ತನೇ ಹಾಗೂ ದ್ವಿತೀಯ ಪಿಯುಸಿ ನಂತರ ಕೋರ್ಸುಗಳ ಆಯ್ಕೆಗೆ ಈ ಮೇಳ ಸಹಕಾರಿಯಾಗಿದೆ ಎಂದರು.

ಜಿಲ್ಲೆಯಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಬಿಸಿಲಿನ ತಾಪಮಾನ ಏರಿಕೆಯಾಗಿದ್ದು, ವಿದ್ಯಾರ್ಥಿಗಳು ತಮ್ಮ ಆರೋಗ್ಯ ಕಡೆಗೆ ಹೆಚ್ಚಿನ ಕಾಳಜಿ ವಹಿಸಬೇಕು. ಸರಿಯಾದ ಸಮಯಕ್ಕೆ ಹೆಚ್ಚಾಗಿ ನೀರು



ಕುಡಿಯಬೇಕು. ಜಿಲ್ಲಾಡಳಿತದಿಂದ ಈ ಬಗ್ಗೆ ಮಾರ್ಗಸೂಚಿಗಳನ್ನು ಬಿಡುಗಡೆ ಮಾಡಲಾಗಿದೆ. ಅವುಗಳನ್ನು ಎಲ್ಲರೂ ಪಾಲಿಸಬೇಕು ಎಂದರು. ಈ ವೇಳೆ ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ ಅವರು ಮಾತನಾಡಿ, ವಿದ್ಯಾರ್ಥಿಗಳು ಶಿಕ್ಷಣದ ಜೊತೆಗೆ ವೃತ್ತಿಪರ ಕೌಶಲ್ಯಗಳನ್ನು ಬೆಳೆಸಿಕೊಂಡು ಜೀವನದಲ್ಲಿ ಉನ್ನತ ಸಾಧನೆ ಮಾಡಬೇಕು ಎಂದರು.

ವಿವಿಧ ಮಳಿಗೆ ಉದ್ಘಾಟನೆ: ನಗರದ ರಂಗಮಂದಿರದ ಆವರಣದಲ್ಲಿ ವಿದ್ಯಾರ್ಥಿಗಳ ಉಜ್ವಲ ಭವಿಷ್ಯಕ್ಕಾಗಿ ವಿಶೇಷ ಅವಕಾಶ ಪ್ರೌಢ ಶಾಲೆ ಹಾಗೂ ಪದವಿ ಪೂರ್ವ ಹಂತದ ವಿದ್ಯಾರ್ಥಿಗಳಿಗೆ ಮುಂದಿನ ಶಿಕ್ಷಣ, ವಿದ್ಯಾರ್ಥಿ ವೇತನ ಮತ್ತು ಉದ್ಯೋಗಾವಕಾಶಗಳ ಬಗ್ಗೆ ಸಮಗ್ರ ಮಾಹಿತಿ ಹಾಗೂ ಮಾರ್ಗದರ್ಶನ ನೀಡುವ ಉದ್ದೇಶದಿಂದ ಸ್ಥಾಪಿಸಲಾಗಿದ್ದ ವಿವಿಧ ಮಳಿಗೆಗಳಿಗೆ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಹಾಲಸಿದ್ದಪ್ಪ ಪೂಜಾರಿ ಅವರು ಚಾಲನೆ ನೀಡಿದರು. ಮಳಿಗೆಯಲ್ಲಿ ಕೃಷಿ ವಿಶ್ವವಿದ್ಯಾಲಯ ಅಡಿಯಲ್ಲಿನ ಕೋರ್ಸ್ಗಳ ಮಾಹಿತಿ, ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಜಿಲ್ಲಾ ಆರೋಗ್ಯ ಇಲಾಖೆ, ಕಾರ್ಮಿಕ ಕಲ್ಯಾಣ ಇಲಾಖೆ ಸೇರಿದಂತೆ ಇತರೆ ಸರ್ಕಾರಿ ಇಲಾಖೆಗಳಿಂದ ವಿವಿಧ ಶಿಕ್ಷಣಾವಕಾಶಗಳು, ತಾಂತ್ರಿಕ ಶಿಕ್ಷಣ, ಐಟಿಐ, ಡಿಪ್ಲೋಮಾ, ಇಂಜಿನಿಯರಿಂಗ್, ಮೆಡಿಕಲ್, ಕೌಶಲ್ಯ ತರಬೇತಿ, ಕೃಷಿ, ಕಂಪ್ಯೂಟರ್ ಕೋರ್ಸಗಳು, ವಿದ್ಯಾರ್ಥಿ ವೇತನ, ತರಬೇತಿ ಕೇಂದ್ರಗಳ ಕುರಿತು ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಯಿತು.

1,407ಕ್ಕೂ ಹೆಚ್ಚು ವಿದ್ಯಾರ್ಥಿಗಳು ನೋಂದಣಿ: ವೃತ್ತಿ ಶಿಕ್ಷಣ ಪ್ರದರ್ಶನ ಮತ್ತು ಕೆರಿಯರ್ ಮೇಳದಲ್ಲಿ ಜಿಲ್ಲೆಯ ವಿವಿಧ ಶಾಲೆಯ 1,407ಕ್ಕೂ ಹೆಚ್ಚು ವಿದ್ಯಾರ್ಥಿಗಳು ನೋಂದಣಿಯನ್ನು ಮಾಡಿಕೊಳ್ಳುವ ಮೂಲಕ ಕಾರ್ಯಕ್ರಮದಲ್ಲಿ ಭಾಗಿಯಾಗಿದ್ದರು. ಕರಿಯರ್ ಮೇಳದ ಪೋಸ್ಟರ್ ಬಿಡುಗಡೆ ಮಾಡಲಾಯಿತು. ಕರಿಯರ್ ರಥವನ್ನು ಎಳೆಯಲಾಯಿತು. ಇದಕ್ಕೂ ಮುಂಚೆ ದೇವದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿಗಳಾದ ಮಲ್ಲಿಕಾರ್ಜುನ ಅವರಿಂದ ಭಾರತ ಸಂವಿಧಾನದ ಪೀಠಿಕೆಯನ್ನು ಬೋಧಿಸಲಾಯಿತು. ಇದೇ ಸಂದರ್ಭದಲ್ಲಿ ಪದವಿ ಪೂರ್ವ ಶಿಕ್ಷಣ ಇಲಾಖೆಯ ಪ್ರಭಾರಿ ಉಪ ನಿರ್ದೇಶಕರಾದ ಸೋಮಶೇಖರಪ್ಪ ಹೊಕ್ರಾಣಿ, ಡಯಟ್ ಪ್ರಾಂಶುಪಾಲರು ಹಾಗೂ ಅಭಿವೃದ್ಧಿ ಉಪ ನಿರ್ದೇಶಕರಾದ ಚಂದ್ರಶೇಖರ ಭಂಡಾರಿ, ಡಯಟ್ ಹಿರಿಯ ಉಪನ್ಯಾಸಕರಾದ ಶಿವಮ್ಮ, ಶರಣಪ್ಪ ವಟಗಲ್, ಡಯಟ್ ನೋಡಲ್ ಅಧಿಕಾರಿ ಸುಖದೇವ್, ಶಿವಮಣಿ ಸೇರಿದಂತೆ ವಿವಿಧ ಶಾಲಾ ಹಾಗೂ ಕಾಲೇಜಿನ ಶಿಕ್ಷಕರು, ಉಪನ್ಯಾಸರು, ವಿದ್ಯಾರ್ಥಿಗಳು ಇದ್ದರು.

## ನೇಮಕಾತಿ ಪ್ರಕಟಣೆ

DHFWS ಕೊಪ್ಪಳ ನೇಮಕಾತಿ 2026–6 ಕ್ಲಿನಿಕಲ್ ಸೈಕಾಲಜಿಸ್ಟ್ ಹುದ್ದೆಗಳಿಗೆ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ DHFWS ಕೊಪ್ಪಳ ನೇಮಕಾತಿ 2026: 6 ಕ್ಲಿನಿಕಲ್ ಸೈಕಾಲಜಿಸ್ಟ್ ಹುದ್ದೆಗಳಿಗೆ ಅರ್ಜಿ ಸಲ್ಲಿಸಿ. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ ಕೊಪ್ಪಳ ಮಾರ್ಚ್ 2026 ರ DHFWS ಕೊಪ್ಪಳ ಅಧಿಕೃತ ಅಧಿಸೂಚನೆಯ ಮೂಲಕ ಕ್ಲಿನಿಕಲ್ ಸೈಕಾಲಜಿಸ್ಟ್ ಹುದ್ದೆಗಳನ್ನು ಭರ್ತಿ ಮಾಡಲು ಅರ್ಹ ಮತ್ತು ಆಸಕ್ತ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಿದೆ. ಕೊಪ್ಪಳ ಕರ್ನಾಟಕ ಸರ್ಕಾರದಲ್ಲಿ ವೃತ್ತಿಜೀವನವನ್ನು ಹುಡುಕುತ್ತಿರುವ ಉದ್ಯೋಗಾಕಾಂಕ್ಷಿಗಳು ಈ ಅವಕಾಶವನ್ನು ಬಳಸಿಕೊಳ್ಳಬಹುದು. ಆಸಕ್ತ ಅಭ್ಯರ್ಥಿಗಳು ಮಾರ್ಚ್ 25, 2026 ರಂದು ಅಥ–'ವಾ ಮೊದಲು ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬಹುದು. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಪ್ರಾರಂಭ ದಿನಾಂಕ: 11–03–2026 ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 25–ಮಾರ್ಚ್–2026 ಅಧಿಕೃತ ವೆಬ್‌ಸೈಟ್: koppal.nic.in

## ವಿಜನ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಇಫ್ತಾರ್ ಸೌಹಾರ್ದ ಕೂಟ ಯಶಸ್ವಿ

ನೈಜ್ಯ ದೆಸೆ ನ್ಯೂಸ್

**ಇಸ್ಲಾಂ ಹಾಗೂ ಲಿಂಗಾಯತ ಧರ್ಮಗಳಲ್ಲಿ ಹಲವು ವಿಚಾರಗಳಲ್ಲಿ ಹೊಂದಾಣಿಕೆ ಇರುವುದಾಗಿ ವಾಗ್ಮಿ ಲಾಲ್ ಹುಸೇನ್ ಕಂದಗಲ್ ಹೇಳಿದರು. ನಗರದಲ್ಲಿ ವಿಜನ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಇಫ್ತಾರ್ ಸೌಹಾರ್ದ ಕೂಟದಲ್ಲಿ ಮಾತನಾಡಿದ ಅವರು, ಉಪವಾಸ ಎಂದರೆ ಕೇವಲ ಆಹಾರ ತ್ಯಜಿಸುವುದಲ್ಲ, ಪಂಚೇಂದ್ರಿಯಗಳ ಮೇಲೆ ನಿಯಂತ್ರಣ ಸಾಧಿಸುವುದಾಗಿದೆ ಎಂದು ಹೇಳಿದರು.ಉಪವಾಸದಲ್ಲಿದ್ದು ಸುಳ್ಳು ಹೇಳಿದರೆ ಅದರ ಅರ್ಥವೇ ಇಲ್ಲ. ಹಿಂದೂ ಧರ್ಮದಲ್ಲಿಯೂ ಉಪವಾಸದ ಕಲ್ಪನೆ ಇದೆ. ಬೈಬಲ್ ಹಾಗೂ ಬೌದ್ಧ ಧರ್ಮದಲ್ಲಿಯೂ ಉಪವಾಸದ ಉಲ್ಲೇಖ ಕಾಣಬಹುದು ಎಂದು ತಿಳಿಸಿದರು.**




ಉಪವಾಸದ ಕುರಿತು ಕುರಾನ್‌ನ ಕಲ್ಪನೆಗಳನ್ನು ವಿವ–ರಿಸಿದ ಅವರು, ಒಬ್ಬ ವ್ಯಕ್ತಿ ಯಾರೂ ಇಲ್ಲದ ಸ್ಥಳದಲ್ಲಿ ಆಹಾರ ಸೇವಿಸಿ ಬಂದು ಉಪವಾಸ ಇದ್ದೇನೆ ಎಂದು ಹೇಳಬಹುದು. ಆದ–'ರೆ ದೇವರ ಭಯ ಮತ್ತು ದೇವರ ಆದೇಶ ಪಾಲಿಸುವ ನಂಬಿಕೆ ಇರುವುದರಿಂದ ಯಾರೂ ಆ ರೀತಿಯಲ್ಲಿ ವರ್ತಿಸುವುದಿಲ್ಲ ಎಂದರು. ಉಪವಾಸ ಬಿಡುವ ಸಂದರ್ಭದಲ್ಲಿ ಉಪವಾಸಿಗನೊಂದಿಗೆ ಸೇರಿ ಉಪವಾಸ ಇಲ್ಲದವರು ಆಹಾರ ಸೇವಿಸಿದರೂ ಉಪವಾಸಿಗನಿಗೆ ಸಿಗುವಷ್ಟು ಪುಣ್ಯ ಸಿಗುತ್ತದೆ ಎಂದು ಪ್ರವಾದಿಗಳು ಹೇಳಿದ್ದಾರೆ. ನಮಾಜ್, ಹಜ್ ಮತ್ತು ಉಪವಾಸ ಮಾಡುವುದಕ್ಕಿಂತಲೂ ನಾಲಿಗೆಯ ಮೇಲೆ ನಿಯಂತ್ರಣ ಸಾಧಿಸುವುದು ಮುಖ್ಯವಾಗಿದೆ. ನಮ್ಮ ನಾಲಿಗೆಯಿಂದ ಮತ್ತೊಬ್ಬರ ಜೀವಕ್ಕೂ ಅಪಾಯವಾಗಬಹುದು, ಜೀವನಕ್ಕೂ ಅರ್ಥ ಸಿಗಬಹುದು. ಆದ್ದರಿಂದ ಗೌರವಯುತ ಮಾತುಗಳನ್ನು ಬಳಕೆ ಮಾಡಬೇಕು ಎಂದು ಹೇಳಿದರು. ಯಾವ ದೇವರ ಭಯದಿಂದ ನಾವು ಉಪವಾಸ ಇದ್ದೇವೋ, ಅದೇ ದೇವರ ಭಯವನ್ನು ಭ್ರಷ್ಟಾಚಾರ, ಅನಾಚಾರ, ಕೊಲೆ ಹಾಗೂ ಕೋಮುವಾದಕ್ಕೆ ಪ್ರಚೋದನೆ ನೀಡುವ ಸಂದರ್ಭದಲ್ಲೂ ನೆನಪಿಸಿಕೊಳ್ಳಬೇಕು. ಧರ್ಮ ಹಾಗೂ ಜಾತಿಗಳ ಆಧಾರದಲ್ಲಿ ಸಮಾಜವನ್ನು ವಿಭಜಿಸುವ ಪ್ರಯತ್ನಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಪ್ರಚೋದನಕಾರಿ ಮಾತುಗಳಿಗೆ ಬಲಿಯಾಗಬಾರದು ಎಂದು ಅವರು ಕಿವಿಮಾತು ಹೇಳಿದರು. ಮಧ್ಯಪ್ರಾಚ್ಯದಲ್ಲಿ ನಡೆಯುತ್ತಿರುವ ಯುದ್ಧ ಪರಿಸ್ಥಿತಿಯನ್ನು ಉಲ್ಲೇಖಿಸಿ ಮಾತನಾಡಿದ ಅವರು, ಅನ್ಯಾಯವಾಗಿ ಒಬ್ಬ ಮನುಷ್ಯನನ್ನು ಕೊಂದರೆ ಇಡೀ ಮಾನವೀಯತೆಯನ್ನು ಕೊಂದ ಪಾಪವಾಗುತ್ತದೆ ಎಂದು ಕುರಾನ್ ಹೇಳುತ್ತದೆ. ಯುದ್ಧಕ್ಕೆ ಅರ್ಥವಿಲ್ಲ ಎಂದು ಹೇಳಿದರು. ಲಿಂಗಾಯತ ಧರ್ಮದ ರಾಜ್ಯಾಧ್ಯಕ್ಷ ಈಶಣ್ಣ ಕೊರ್ಲಳ್ಳಿ ಮಾತನಾಡಿ, ಇಂತಹ ಸೌಹಾರ್ದ ಕೂಟಗಳಲ್ಲಿ ಸರ್ಕಾರಿ ಅಧಿಕಾ–ರಿಗಳು ಸಹ ಭಾಗವಹಿಸಬೇಕು. ಈ ಕಾರ್ಯಕ್ರಮಗಳು ಕೇವಲ ಮುಸ್ಲಿಂ ಸಮುದಾಯಕ್ಕೆ ಸೀಮಿತವಾಗಿಲ್ಲ, ಎಲ್ಲಾ ಧರ್ಮಗಳ ಜನರು ಭಾಗವಹಿಸುವ ವೇದಿಕೆಗಳಾಗಿವೆ ಎಂದು ಹೇಳಿದರು. ಜಕಾತ್ ಸೇರಿದಂತೆ ಹಲವು ವಿಚಾರಗಳಲ್ಲಿ ಇಸ್ಲಾಂ ಮತ್ತು ಲಿಂಗಾಯತ ಧರ್ಮಗಳ ನಡುವೆ ಸಾಮ್ಯತೆಗಳಿವೆ. ರಂಜಾನ್ ಮಾಸದಲ್ಲಿ ಅಂತರಂಗ ಹಾಗೂ ಬಹಿರಂಗ ಶುದ್ಧಿಯನ್ನು ಒತ್ತಿ ಹೇಳಲಾಗುತ್ತದೆ. ಬಸವಣ್ಣನವರ ಉಪದೇಶದಲ್ಲಿಯೂ ಶುದ್ಧಿಯ ಮಹತ್ವವನ್ನು ವಿವರಿಸಲಾಗಿದೆ ಎಂದು ಹೇಳಿದರು. ಪ್ರವಾದಿ ಮುಹಮ್ಮದ್ ಅವರ ಜೀವನದಲ್ಲಿ ಕಂಡುಬರುವ ಸಹಿಷ್ಣುತೆ ಮತ್ತು ಉದಾರತೆಯ ಘಟನೆಗಳನ್ನು ನೆನಪಿಸಿದ ಅವರು, ಪ್ರವಾದಿಗಳ ಮೇಲೆ ಕಸ ಹಾಕುತ್ತಿದ್ದ ಮಹಿಳೆ ಒಂದು ದಿನ ಕಸ ಹಾಕದಿದ್ದಾಗ ಅವರ ಆರೋಗ್ಯ ವಿಚಾರಿಸಿದ ಉದಾಹರಣೆ ನಮಗೆ ಮಾದ–ರಿಯಾಗಿದೆ. ಜ್ಞಾನ ಎಲ್ಲಿಂದ ಬಂದರೂ ಸ್ವೀಕರಿಸಬೇಕು ಎಂಬ ಸಂದೇಶವನ್ನು ಎಲ್ಲ ಧರ್ಮಗಳು ನೀಡುತ್ತವೆ ಎಂದು ಹೇಳಿದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಹೀದ್ ತಹಶಿಲ್ದಾರ್ ವಹಿಸಿದ್ದರು. ಅತಿಥಿಗಳಾಗಿ ಆಗಮಿಸಿದ್ದ ಬಸವರಾಜ್ ಬಳೂಳ್ಳಿ ಹಾಗೂ ವೈದ್ಯ ಸುಶೀಲ್ ಕುಮಾರ್ ಕಲಾಲ್ ಸಹ ಮಾತನಾಡಿದರು.

# ಭೋಜನಾಲಯಕ್ಕೆ ಬೀಗ, ಅಧಿಕಾರಿಗಳ ಎಡವಟ್ಟು, ಮಕ್ಕಳು ಬೀದಿಯಲ್ಲಿ ಊಟ

ನೈಜ್ಯ ದೆಸೆ ನ್ಯೂಸ್

**ಮಸ್ಕಿ: ತಾಲೂಕಿನ ಹಾಲಾಪೂರನ ಸರಕಾರಿ ಪ್ರೌಢಶಾಲೆಯಲ್ಲಿ 2021 – 22 ಸಾಲಿನ ನರೇಗಾ ಯೋಜನೆಯ ಅಡಿಯಲ್ಲಿ 12 ಲಕ್ಷ ರೂಪಾಯಿ ಮೊತ್ತದ ಭೋಜನಾಲಯ ಹಾಗೂ 6 ಲಕ್ಷ ರೂಪಾಯಿ ಮೊತ್ತದ ಹೈಟೆಕ್ ಶೌಚಾಲಯ ಕಾಮಗಾರಿ ಕೆಲಸ ಮುಗಿದು ಮೂರು ವರ್ಷ ಮುಗಿತಾ ಬಂದರು.**

ಇನ್ನು ಯಾವುದೇ ಬಿಲ್ ಮಾಡಿಲ್ಲವೆಂದು ರವಿಕಾಂತ ದೇಸಾಯಿ ಮತ್ತು ಅಮರೇಶ ಶಂಕರನಗರಕ್ಯಾಂಪ ಇವರು ಪಿಡಿಒ ವಿಶ್ವನಾಥ ಹೂಗಾರ, ತಾಲೂಕ ಪಂಚಾಯತಿ ಇಒ ಅಮರೇಶ ಯಾದವ ಅವರಿಗೆ ಹತ್ತಾರು ಸಾರಿ ಹೇಳಿದರು ಮನವಿ ಮಾಡಿದರು ಇದುವರೆಗೂ ಒಂದು ರೂಪಾಯಿ ಬಿಲ್ಲು ಮಾಡಿಲ್ಲವೆಂದು ಇಂದು ಭೋಜನಾಲಯಕ್ಕೆ ಬೀಗ ಹಾಕಿ ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಈ ಸಮಸ್ಯೆಯ ಕುರಿತು ಸ್ವತಃ ಪಾಟೀಲ್ ನ್ಯೂಸ್ ಚಾನಲ್ ನಿಂದ



ಸ್ಥಳೀಯ ಪಿಡಿಒ ವಿಶ್ವನಾಥ ಹೂಗಾರ, ತಾಲೂಕು ಪಂಚಾಯತಿ ಇಒ ಅಮರೇಶ್ ಯಾದವ, ಜಿಲ್ಲಾ ಪಂಚಾಯತಿ ಸಿಇಒ ಅವರಿಗೆ ಎರಡು ಮೂರು ಬಾರಿ ಕರೆ ಮಾಡಿದರೆ ನೋ ರೆಸ್ಪಾನ್ಸ್, ಎರಡು ಮೂರು ಗಂಟೆಯಾದರೂ ಪುನ ಮರಳಿ ಕರೆ ಮಾಡುವ ಸೌಜನತೆ ಇಲ್ಲದ ನಿರ್ಲಕ್ಷ ಅಧಿಕಾರಿಗಳು ಬೇಜವಾಬ್ದಾರಿಯಿಂದ ಪಾಪ ಏನು ಮಾಡದ ಶಾಲಾ ಮಕ್ಕಳು ಹೊರಗಡೆ ಬೀದಿಯಲ್ಲಿ ಊಟ ಮಾಡಿ ನೋವನ್ನು ಹಂಚಿಕೊಂಡಿದ್ದು ಸಾಕ್ಷಿಯಾಗಿದ್ದು ತೀವ್ರ ನಾಚಿಕೆಯ ಸಂಗತಿಯಾಗಿದೆ ಎಂದು ಗ್ರಾಮಸ್ಥರು ತೀವ್ರವಾಗಿ ಖಂಡಿಸಿದರು. ಈ ಬಗ್ಗೆ ಮಾಜಿ ಗ್ರಾಮ ಪಂಚಾಯಿತಿ ಅಧ್ಯಕ್ಷ ರವಿಕಾಂತ್ ದೇಸಾಯಿ ಮಾತನಾಡಿ ಪಿಡಿಒ ವಿಶ್ವನಾಥ ಹೂಗಾರ ಅವರಿಗೆ ಮತ್ತು ತಾಲೂಕು ಪಂಚಾಯತಿ ಇಓ ಅವರಿಗೆ ಬಿಲ್ ಕುರಿತು ನೂರು ಸಲ ಗಮನಕ್ಕೆ ತಂದರು ಕಿಂಚತ್ತು ಕಾಳಜಿ ವಹಿಸಲಿಲ್ಲ ನಾವು ಸಾಲ ಮಾಡಿ ಕೆಲಸ ಮಾಡಿಸಿದ್ದೇವೆ ಈಗ ಏನು ಮಾಡಬೇಕು ಎಂಬ ನೋವನ್ನು ಹೇಳಿದರು.

ಹಾಗೆ ತಾಲೂಕು ಪಂಚಾಯತಿ ಉದ್ಯೋಗ ಖಾತ್ರಿ ಸಹಾಯಕ ನಿರ್ದೇಶಕ ಶಿವಾನಂದ ರೆಡ್ಡಿ ಮಾತನಾಡಿ ಈ ಎರಡು ಕಾಮಗಾರಿಗಳು ಉತ್ತಮವಾಗಿ ಕೆಲಸ ಮಾಡಿದ್ದಾರೆ ಈ ಬಗ್ಗೆ ಪಿಡಿಒ ಅವರಿಗೆ ದಾಖಲೆಗಳನ್ನು ಕೊಡಿ ಎಂದು ಸ್ವತ ನಾನೇ ಹೇಳಿದ್ದು ಆದರೆ ಪಿಡಿಓ ನಿರ್ಲಕ್ಷ ಮಾಡುತ್ತಿದ್ದಾರೆ ಎಂದು ಸುದ್ದಿಯೊಂದಿಗೆ ಮಾತನಾಡಿದರು. ಗ್ರಾಮಸ್ಥರಾದ ಉಮೇಶ ದೊಡ್ಡಮನಿ, ವೀರನಗೌಡ ಮಾಲಿಪಾಟೀಲ್, ಅಮರೇಶ್ ಮಲ್ಲಟ, ಚಂದಪ್ಪ ಬೋವಿ, ಲಕ್ಷ್ಮಣ್ ನಾಯಕ ಇನ್ನಿತರ ಇದ್ದರು.

# ಗರ್ಭಕಂಠದ ಕ್ಯಾನ್ಸರ್ ತಡೆಗಾಗಿ14 ವರ್ಷದ ಹೆಣ್ಣು ಮಕ್ಕಳು ಹೆಚ್‌ಪಿಇ ಲಸಿಕೆ.




ನೈಜ್ಯ ದೆಸೆ ನ್ಯೂಸ್

**ಸಿರವಾರ: ಭವಿಷ್ಯದಲ್ಲಿ ಹೆಣ್ಣು ಮಕ್ಕಳನ್ನು ಗರ್ಭಕಂಠದ ಕ್ಯಾನ್ಸರ್‌ನಿಂದ ಮುಕ್ತಗೊಳಿಸಲು ನೆಮ್ಮದಿಯ ಜೀವನ ನಡೆಸಲು ಪ್ರಸ್ತುತ 14 ವರ್ಷದ ಹೆಣ್ಣು ಮಕ್ಕಳಿಗೆ ಹಾಕಲಾಗುವ ಹೆಚ್.ಪಿ.ವಿ ಲಸಿಕೆಯನ್ನು ಪಾಲಕರು ಯಾವುದೆ ಹಿಂದೇಟು ಹಾಕದೆ ಲಸಿಕೆ ಹಾಕಿಸಿರಿ, ಇದಕ್ಕಾಗಿ ಎಲ್ಲರೂ ಮುಂದೆ ಬರಬೇಕು ಎಂದು ಸಿರವಾರ ಸಮುದಾಯ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ ಸುನೀಲ್ ಸರೋದೆ ತಿಳಿಸಿದರು.**

ರಾಯಚೂರು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ ಮಾನವಿ, ಸಿರವಾರ ಸಮುದಾಯ ಆರೋಗ್ಯ ಕೇಂದ್ರದ ಮೂಲಕ 'ನಮ್ಮ ಕ್ಲಿನಿಕ್' ನಲ್ಲಿ ಪಿಡಬ್ಲ್ಯುಡಿ ಸರಕಾರಿ ಬಾಲಕಿಂ–ಯರ ಪ್ರೌಢಶಾಲೆಯ 14 ವರ್ಷದ ಶಾಲಾ ಮಕ್ಕಳಿಗೆ ಹೆಚ್‌ಪಿವಿ ಲಸಿಕೆ ಹಾಕುವ ಪೂರ್ವದಲ್ಲಿ ಮಾತನಾಡಿ, ಹೆಣ್ಣು ಮಕ್ಕಳ ಜೀವನದಲ್ಲಿ ಗಂಭೀರ ಆರೋಗ್ಯ ಸಮಸ್ಯೆಯನ್ನುಂಟು ಮಾಡುವ ಗರ್ಭಕಂಠದ ಕ್ಯಾನ್ಸರ್ ತಡೆಗೆ ಈ ಲಸಿಕೆ ಅತ್ಯಂತ ಉಪಯುಕ್ತವಾಗಿದ್ದು,

ಅನಗತ್ಯ ತಪ್ಪು ಮಾಹಿತಿಗಳಿಗೆ ಕಿವಿಗೊಡದೆ, 14 ವರ್ಷದ ಹೆಣ್ಣು ಮಕ್ಕಳಿಗೆ ಉಚಿತ ಹೆಚ್.ಪಿ.ವಿ (ಹೂಮನ್ ಪ್ಯಾಪಿಲೋಮ ವೈರಸ್) ವಿರುದ್ಧದ ಲಸಿಕೆ ನೀಡಲಾಗುತ್ತಿದೆ. ಪೋಷಕರು ತಮ್ಮ ಮಕ್ಕಳಿಗೆ ತಪ್ಪದೇ ಹತ್ತಿರದ ಸರ್ಕಾರಿ ಆಸ್ಪತ್ರೆಗೆ ಕರೆದುಕೊಂಡು ಬಂದು ಲಸಿಕೆ ಹಾಕಿಸಲು ಕೋರಿದರು. ಇದೆ ಸಂದರ್ಭದಲ್ಲಿ 60 ಮಕ್ಕಳಿಗೆ ಲಸಿಕೆ ಹಾಕಲಾಯಿತು.

ಗರ್ಭಕಂಠದ ಕ್ಯಾನ್ಸರ್‌ಗೆ ಕಾರಣಗಳು: ಸಾಮಾನ್ಯವಾಗಿ ವೈಯಕ್ತಿಕ ಶುಚಿತ್ವ, ಜನನಾಂಗಗಳಲ್ಲಿ ತೊಂದರೆ, ಹುಣ್ಣು, ಅಸುರಕ್ಷಿತ ಲೈಂಗಿಕ ಸಂಪರ್ಕದಿಂದ ಹರಡುವ ಹೂಮನ್ ಪ್ಯಾಪಿಲೋಮ ವೈರಸ್ (ಹೆಚ್.ಪಿ.ವಿ) ಸೋಂಕು ಕ್ರಮೇಣ ಗರ್ಭಕಂಠದ ಜೀವಕೋಶಗಳಲ್ಲಿ ಬದಲಾವಣೆಗಳಾಗಿ ಕ್ಯಾನ್ಸರ್ ಆಗಿ ಬದಲಾಗುತ್ತದೆ. ಈ ಹಿನ್ನಲೆಯಲ್ಲಿ ಮಾರಕವಾಗುವುದನ್ನು ತಡೆಯಲು ಹೆಚ್.ಪಿ.ವಿ ಲಸಿಕೆಯು ಸೂಕ್ತವಾಗಿದೆ. ಈ ಸಂದರ್ಭದಲ್ಲಿ ಡಾ ಸೌಮ್ಯ ವೈದ್ಯಾಧಿಕಾರಿ, ಮುಖ್ಯೋಪಾಧ್ಯಾಯ ಶಂಕರ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಶ್ರೀದೇವಿ, ಕ್ಷೇತ್ರ ಲಸಿಕಾ ಮೇಲ್ವಿಚಾರಕ ರಾಘವೇಂದ್ರ, ಆರೋಗ್ಯ ನಿರೀಕ್ಷಣಾಧಿಕಾರಿ ಯಲ್ಲಾಲಿಂಗ, ಶೂಶ್ರೂಷಣಾಧಿಕಾರಿ ಅನೀತಾ, ಶಾಲಾ ಶಿಕ್ಷಕರಾದ ಸುವರ್ಣ, ಗೌರಿ, ಶಿವಾನಂದ, ಎಲ್‌ಟಿಓ ರತ್ನ, ಸಿಬ್ಬಂದಿ ರಾಖೇಶ್, ಆಶಾ ಕಾರ್ಯಕರ್ತೆ ಯಮನಮ್ಮ, ಸೌಭಾಗ್ಯ ಸೇ–ರಿದಂತೆ ಶಾಲಾ ಮಕ್ಕಳು ಉಪಸ್ಥಿತರಿದ್ದರು.

# ವಿಶ್ವ ಗ್ರಾಹಕರ ದಿನಾಚರಣೆ 2026ರ ಕಾರ್ಯಕ್ರಮ

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಗ್ರಾಹಕರ ಹಕ್ಕುಗಳ ಚಲಾವಣೆ ಜೊತೆಗೆ ಪ್ಲಾಸ್ಟಿಕ್ ಬಳಕೆಯನ್ನು ಕಡಿಮೆ ಮಾಡಬೇಕು. ಪರಿಸರ ಸಂರಕ್ಷಣೆಗೆ ಪ್ರತಿಯೊಬ್ಬರೂ ಕಾಳಜಿ ವಹಿಸಬೇಕೆಂದು ಹಿರಿಯ ಶ್ರೇಣಿ ದಿವಾಣಿ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಗೌರವಾನ್ವಿತ ಹೆಚ್.ಎ.ಸಾತ್ವಿಕ್ ಅವರು ಹೇಳಿದ್ದಾರೆ.**

ನಗರದ ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಪಂಚಾಯತ್, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಗ್ರಾಹಕರ ದಿನಾಚರಣೆ 2026ರ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಪ್ಲಾಸ್ಟಿಕ್ ಬಳಕೆಯಲ್ಲಿ ರಾಯಚೂರಿನ ಸದರ್ ಬಜಾರ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬೆಳೆಂಬೆಳಿಗ್ಗೆ ಎಲ್ಲೆಂದರಲ್ಲಿ ರಾಶಿ ರಾಶಿಯ ಪ್ಲಾಸ್ಟಿಕ್ ನೋಡಬಹುದಾಗಿದೆ. ಇದನ್ನು ನಿಯಂತ್ರಿಸಲು ಕೇವಲ ಅಧಿಕಾರಿಗಳಿಂದ ಸಾಧ್ಯವಿಲ್ಲ. ಗ್ರಾಹಕರು ಸ್ವಯಂ ಪ್ರೇರಿತವಾಗಿ ಬಳಕೆಯನ್ನು ಕಡಿಮೆ ಮಾಡಬೇಕೆಂದರು.

ರಾಯಚೂರು ಜಿಲ್ಲೆದಂದ್ಯಾತ ಕೆಟ್ಟ ಎಣ್ಣೆಯಲ್ಲಿ ಮಿರ್ಚಿ, ಗೋಬಿ ಮಂಚೂರಿ ಸೇ–ರಿದಂತೆ ಇತರೆ ಆಹಾರ ಪದಾರ್ಥಗಳನ್ನು ತಯಾ–ರಿಸುತ್ತಿದ್ದು, ಇದರಿಂದಾಗಿ ಗ್ರಾಹಕರ ಆರೋಗ್ಯ ಮೇಲೆ ಪ್ರಭಾವ ಬೀರುತ್ತದೆ. ವ್ಯಾಪಾರಸ್ಥರು ಗ್ರಾಹಕರ ಆರೋಗ್ಯ ಕಡೆ ಗಮನಹರಿಸಬೇಕು. ಕೇವಲ ಲಾಭದ ಕಡೆ ಗಮನಹರಿಸಬಾರದು ಎಂದರು. ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ




ಅಧ್ಯಕ್ಷರಾದ ಗೌರವಾನ್ವಿತ ಕೆ.ವಿ.ಸುರೇಂದ್ರ ಬಾಬು ಅವರು ಮಾತನಾಡಿ, ವ್ಯಾಪಾರಸ್ಥರು ವಸ್ತುಗಳಿಗೆ ನಿಗದಿತ ಬೆಲೆಗಿಂತ ಹೆಚ್ಚಿನ ದರ ಪಡೆಯುವಂತಿಲ್ಲ. ವಸ್ತುಗಳು ದೋಷದಿಂದ ಕೂಡಿದ್ದರೆ ಪ್ರಶ್ನೆ ಮಾಡುವ ಹಕ್ಕು ಗ್ರಾಹಕ–ರಿಗಿದೆ. ಅವಧಿ ಮೀರಿದ ಉತ್ಪನ್ನಗಳನ್ನು ನೀಡಿದರೆ ಅಂತಹವರ ಮೇಲೆ ಗ್ರಾಹಕರ ಆಯೋಗದಲ್ಲಿ ಪ್ರಕರಣ ದಾಖಲಿಸಿ ಪರಿಹಾರ ಪಡೆಯಬಹುದು. ಜಿಲ್ಲಾ ಗ್ರಾಹಕರ ವ್ಯಾಜ್ಯ ಪರಿಹಾರ ಆಯೋಗ ಹಾಗೂ ರಾಜ್ಯ ಆಯೋಗದಲ್ಲಿ ಇತ್ತಿಷ್ಟು ಪರಿಹಾರ ಪಡೆಯಬಹುದಾಗಿದೆ. ಈ ನಿಟ್ಟಿನಲ್ಲಿ ಪ್ರತಿಯೊಬ್ಬರೂ ಗ್ರಾಹಕರ ಹಕ್ಕುಗಳನ್ನು ಅರಿಯಬೇಕು ಎಂದರು.

ಇಂದಿನ ದಿನಗಳಲ್ಲಿ ಸಾಕಷ್ಟು ಜನರು ವ್ಯಾಪಾರಕ್ಕಾಗಿ ಆನ್ಲೈನ್ ಮೊರೆಹೋಗುತ್ತಿರುವುದನ್ನು ಕಾಣಬಹುದು. ಅಂಗಡಿಗಳಿಂದ ವಸ್ತುಗಳನ್ನು . ಬ್ಯಾಂಕಿಂಗ್ ಹಾಗೂ ವಿಮಾ ಸೌಲಭ್ಯಗಳನ್ನು ಪಡೆಯುವಲ್ಲಿ ಮೋಸ ಹೋಗದಂತೆ ಎಚ್ಚರ ವಹಿಸುವ ನಿಟ್ಟಿನಲ್ಲಿ ಈ ಬಾರಿಯ ವಿಶ್ವ ಗ್ರಾಹಕರ ದಿನವನ್ನು ಸುರಕ್ಷಿತ ಉತ್ಪನ್ನಗಳು ಆತ್ಮವಿಶ್ವಸದ ಗ್ರಾಹಕರು' ಎಂಬ ಘೋಷವಾಕ್ಯದೊಂದಿಗೆ ಆಚರಿಸಲಾಗುತ್ತಿದೆ ಎಂದರು.

ಈ ವೇಳೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ಗೌರವಾನ್ವಿತ ಪ್ರಭುದೇವ್ ಪಾಟೀಲ್ ಅವರು ಮಾತನಾಡಿ, ದೈನಂದಿನ ಜೀವನದಲ್ಲಿ ಪ್ರತಿಯೊಬ್ಬರೂ ಗ್ರಾಹಕರೇ. ಗ್ರಾಹಕರಿಗೆ ನ್ಯಾಯಯುತ, ಯೋಗ್ಯ ಹಾಗೂ ಗುಣಮಟ್ಟದ ಸರಕು ಮತ್ತು ಸೇವೆಗಳನ್ನು ನೀಡುವ ಜವಾಬ್ದಾರಿ ವ್ಯಾಪಾರಸ್ಥರದ್ದು.

ಯಾವುದೇ ವಸ್ತುಗಳನ್ನು ಕೊಡುವವನ ತೃಪ್ತಿಗಾಗಿ ಕೊಳ್ಳುವುದಲ್ಲ, ಅಲ್ಲಿ ಗ್ರಾಹಕರ ಸಂತೃಪ್ತಿಯೇ ಮುಖ್ಯ. ಸುರಕ್ಷತೆ, ಆಯ್ಕೆ ಹಾಗೂ ಆರೋಗ್ಯಪೂರ್ಣ ಪರಿಸರ ಹೊಂದುವ ಹಕ್ಕನ್ನು ಕಾಯ್ದೆಯು ಎಲ್ಲ ಗ್ರಾಹಕರಿಗೂ ನೀಡಿದೆ ಎಂದರು. ಅಡುಗೆ ಅನಿಲದ ಕೊರತೆ ಇಲ್ಲ: ಜಿಲ್ಲೆಯಲ್ಲಿ ಅಡುಗೆ ಅನಿಲದ ದಾಸ್ತಾನು ಹೇರಳವಾಗಿದ್ದು, ಸಾರ್ವಜನಿಕರು ಯಾವುದೇ ರೀತಿಯ ಆತಂಕಕ್ಕೆ ಒಳಗಾಗುವ ಅಗತ್ಯವಿಲ್ಲ. ಇತ್ತೀಚಿನ ದಿನಗಳಲ್ಲಿ ಸಾರ್ವಜನಿಕರು ಆತಂಕದಿಂದ ಅತಿಯಾಗಿ ಗ್ಯಾಸ್ ಬುಕಿಂಗ್ ಮಾಡುತ್ತಿರುವುದು ಕಂಡುಬಂದಿದೆ. ಇದ–ರಿಂದಾಗಿ ವ್ಯವಸ್ಥೆ ಮೇಲೆ ಒತ್ತಡ ಉಂಟಾಗುತ್ತದೆ. ಜಿಲ್ಲೆಯಲ್ಲಿ ಇದಕೂ ಮುಂಚೆ ಪ್ರತಿ ತಿಂಗಳು 6–7 ಸಾವಿರ ಬುಕಿಂಗ್ ಆಗುತ್ತಿದ್ದು, ಪ್ರಸ್ತುತ 10–12 ಸಾವಿರಕ್ಕೂ ಹೆಚ್ಚಿನ ಮಟ್ಟದಲ್ಲಿ ಬುಕ್ಕಿಂಗ್ ಆಗುತ್ತಿವೆ.

ಎಲ್ಲರಿಗೂ ಎಲ್ಪಿಜಿ ದೊರೆಯುತ್ತದೆ. ಯಾರು ಆತಂಕಕ್ಕೆ ಒಳಗಬಾರದೆಂದು ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪ ನಿರ್ದೇಶಕರಾದ ನಜೀರ್ ಅಹಮದ್ ಅವರು ಹೇಳಿದರು. ಸಾರ್ವಜನಿಕರಿಗೆ ಜಾಗೃತಿ: ಕರ್ನಾಟಕ ಆಹಾರ ನಾಗರಿಕ ಮತ್ತು ಸರಬರಾಜು ನಿಗಮ ನಿಯಮಿತದಿಂದ ಸಾರ್ವಜನಿಕ ವಿತರಣೆಯಡಿ ವಿತರಿಸಲಾದ ಸಾರವರ್ಧಿತ ಅಕ್ಕಿಯ ಕುರಿತು, ಕಾನೂನು ಮಾಪನ ಶಾಸ್ತ್ರ ಇಲಾಖೆಯಿಂದ ತೂಕ ಮತ್ತು ಅಳತೆ ಹಾಗೂ ಮೆ: ಸುಮಂತ್ ಫ್ಲಾಮೋಜನ್ ಇಂಡೇನ್ ಗ್ಯಾಸ್ ಏಜೆನ್ಸಿಯಿಂದ ಪ್ರಧಾನ ಮಂತ್ರಿ ಉಜ್ವಲ ಯೋಜನೆಯಡಿಯ ಎಲ್.ಪಿ.ಜಿ ಸುರಕ್ಷತೆ ಕುರಿತು ಸಾರ್ವಜನಿಕ–ರಿಗೆ ಜಾಗೃತಿ ಮೂಡಿಸಲಾಯಿತು.

ಈ ವೇಳೆ ವಕೀಲರಾದ ತಿಮ್ಮಪ್ಪ ಹಾಗೂ ಕುಮಾರಿ ಮೋನಿಷಾ ಅವರಿಂದ ವಿಶ್ವ ಗ್ರಾಹಕರ ದಿನಾಚರಣೆ 2026ರ ಕಾರ್ಯಕ್ರಮ ಕುರಿತು ವಿಶೇಷ ಉಪನ್ಯಾಸನ ನೀಡಿದರು. ಸಂದರ್ಭದಲ್ಲಿ ಜಿಲ್ಲಾ ನ್ಯಾಯವಾದಿಗಳ ಸಂಘದ ಉಪಾಧ್ಯಕ್ಷರಾದ ನಜೀರ್, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ರಿಜಿಸ್ಟ್ರಾರ್ ಮತ್ತು ಸಹಾಯಕ ಆಡಳಿತಾಧಿಕಾರಿಗಳಾದ ಚಂದ್ರಕಾಂತ, ಕಾನೂನು ಮಾಪನ ಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕರಾದ ಅಮೃತಾ ಪಿ.ಚವ್ಹಾಣ, ಕರ್ನಾಟಕ ಆಹಾರ ನಾಗರಿಕ ಮತ್ತು ಸರಬರಾಜು ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರಾದ ಪ್ರಕಾಶ್, ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ವ್ಯವಸ್ಥಾಪಕರಾದ ಶ್ರೀ ಹರೀಶ್, ಪ್ರಥಮ ದರ್ಜೆ ಸಹಾಯಕರಾದ ಜಿ.ಹರೀಶ್ ಸೇರಿದಂತೆ ಅಂಗನವಾಡಿ ಕಾರ್ಯಕರ್ತೆಯರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಇದ್ದರು.

# ಕಾರುಣ್ಯಾಶ್ರಮದಲ್ಲಿ ಪುನೀತ್ ರಾಜಕುಮಾರ್ ಅವರ ಜನ್ಮದಿನ ಸಮಾರಂಭ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಕರ್ನಾಟಕ ರತ್ನ ದಿ.ಡಾ. ಪುನೀತ್ ರಾಜಕುಮಾರ್ ಅವರ ಜನ್ಮದಿನ ಸಮಾರಂಭ ಕಾರ್ಯಕ್ರಮವನ್ನು ಶ್ರೀ ಸದ್ಗುರು ತಿಪ್ಪಯ್ಯ ಆಶ್ರಮ ಕೂಸನೂರ. ಕೋಡಿಹಳ್ಳಿ ಕಲಾ ಸೇವಾ ಸಂಸ್ಥೆ (ರಿ) ತಿಳವಳ್ಳಿ ತಾ. ಹಾನಗಲ್ ಜಿ. ಹಾವೇರಿ ಹಾಗೂ ಶ್ರೀ ವರಸಿದ್ಧಿ ವಿನಾಯಕ ಯುವ ಕಲಾ ಸಂಘ (ರಿ) ಕಾಲ್ವೆ ಕಲ್ಲಾಪುರ ಮತ್ತು ಕರ್ನಾಟಕ ಗ್ರಾಮೀಣ ಯುವ ಕನ್ನಡ ಸಾಹಿತ್ಯ ಕ್ರಿಯಾ ಸಮಿತಿ (ರಿ) ಸುಕ್ಷೇತ್ರ ಮೈಲಾರ ತಾ. ಹೂವಿನಹಡಗಲಿ ಜಿ. ವಿಜಯನಗರ ಮಾತೋಶ್ರೀ ಶ್ರೀ ಲಿಂಗೈಕ್ಯ ರುದ್ರಮ್ಮ ಗುರುಪಾದಪ್ಪ ಕಮಡೊಳ್ಳಿ ಸ್ಮಾರಕ ಟ್ರಸ್ಟ್ ಬೆಳಗಾಲಪೇಟೆ.**

ಅಕ್ಷಯ ಆಹಾರ ಜೋಳಿಗೆ ಸೇವಾ ಟ್ರಸ್ಟ್ (ರಿ)ಸಿಂಧನೂರು. ಸ್ವಾಮಿ ಚಾರಿಟೇಬಲ್ ಟ್ರಸ್ಟ್ (ರಿ) ಕರಡಕಲ್ ಲಿಂಗಸೂಗೂರು ಹಾಗೂ ಅಪ್ಪು ಅಭಿಮಾನಿಗಳು ಸಿಂಧನೂರು ಇವರುಗಳ ಸಯುಕ್ತಾಶ್ರಯದಲ್ಲಿ ಸಿಂಧನೂರು ನಗರದ



ಒಳಬಳ್ಳಾರಿ ರಸ್ತೆಯಲ್ಲಿರುವ ಕಾರುಣ್ಯ ನೆಲೆ ವೃದ್ಧಾಶ್ರಮ ಹಾಗೂ ವಯಸ್ಕರ ಬುದ್ಧಿಮಾಂದ್ಯ ಆಶ್ರಮದಲ್ಲಿ ಸಿಂಧನೂರು ತಾಲೂಕ ಉಮಲೂಟಿ ಗ್ರಾಮದ ಜಾಗೀರ್ ದಾರ ಕುಟುಂಬದಿಂದ ಮಹಾಪ್ರಸಾದ ಸೇವೆ ಹಣ್ಣು ಹಂಪಲುಗಳನ್ನು ವಿತರಿಸಿ ಆಶ್ರಮದ ಆಶ್ರಯದಾತರುಗಳ ವತಿಯಿಂದ ಕೇಕ್ ಕತ್ತರಿಸುವ ಮೂಲಕ ಅತ್ಯಂತ ಅರ್ಥಪೂರ್ಣವಾಗಿ ನೆರವೇರಿತು.

ಈ ಕಾರ್ಯಕ್ರಮದಲ್ಲಿ ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿಕೊಂಡಿದ್ದ ಹಾವೇರಿ ಜಿಲ್ಲೆಯ ಹಾನಗಲ್ ತಾಲೂಕಿನ ತಿಳುವಳ್ಳಿಯ ಕೋಡಿಹಳ್ಳಿ ಕಲಾ ಸೇವಾ ಸಂಸ್ಥೆಯ ಸಂಸ್ಥಾಪಕರಾದ ಡಾ. ಪುಟ್ಟರಾಜ ಕೋಡಿಹಳ್ಳಿ ಮಾತನಾಡಿ ಅಪ್ಪು ಅವರು ನಮ್ಮ ನಾಡು ಕಂಡಂತಹ ಕರುಣೆಯ ಮೂರ್ತಿಗಳಾಗಿದ್ದರು. ಇವರ ಆದರ್ಶ ಸಮಾಜದಲ್ಲಿ ಹಲವಾರು ಯುವಕರು ಮೈಗೂಡಿಸಿಕೊಂಡು ಅನೇಕ ಜನ ಪರ ಕಾರ್ಯಗಳನ್ನು ಮಾಡುತ್ತಿರುವುದು ಮಾನವೀಯತೆಗೆ ಮೆರಗು ತಂದಿದೆ ಎಂದು ಮಾತನಾಡಿದರು. ನಂತರ ಆಶ್ರಮದ ಕಾರ್ಯಧ್ಯಕ್ಷರಾದ ಡಾ.ಚನ್ನಬಸವ ಸ್ವಾಮಿ ಹಿರೇಮಠ ಮಾತನಾಡಿ ಇಂದು ನಮ್ಮ ಕರುಣೆಯ ಕಾರುಣ್ಯ ಕುಟುಂಬದಲ್ಲಿ ಅಪ್ಪು ಅವರ ಜನ್ಮದಿನ ಕಾರುಣ್ಯ ಕುಟುಂಬದ ಹಬ್ಬದಂತಿ–ದೆ ಕರುನಾಡಿನ ಕಾರುಣ್ಯ ಮೂರ್ತಿಯಾಗಿದ್ದರು.

ಡಾ. ಪುನೀತ್ ರಾಜಕುಮಾರ್ ಅವರು ಅವರ ಆದರ್ಶ ವ್ಯಕ್ತಿತ್ವವನ್ನು ನಾವು ಮೈಗೂಡಿಸಿಕೊಂಡು ನಮಗಾದಷ್ಟು ನಾವು ಸಮಾಜಕ್ಕೆ ಸೇವೆ ಅರ್ಪಿಸುತ್ತಿದ್ದೇವೆ. ನಾವು ಒಮ್ಮೆ ಅಶ್ವಿನಿ ಪುನೀತ್ ರಾಜಕುಮಾರ್ ಅವರನ್ನು ಭೇಟಿಯಾಗಿದ್ದು ನಮ್ಮ ಕಾರುಣ್ಯ ಶ್ರಮಕ್ಕೆ ಡಾ. ರಾಜ–ಕುಮಾರ್ ಕುಟುಂಬ ಭೇಟಿ ನೀಡುವ ಸಾಧ್ಯತೆ ಇದೆ. ಸುಮಾರು ಎರಡು ಮೂರು ಕಾರ್ಯಕ್ರಮಗಳಲ್ಲಿ ಶಿವರಾಜ್ ಕುಮಾರ್ ಹಾಗೂ ಗೀತಾ ಶಿವರಾಜ–ಕುಮಾರ್ ನಮ್ಮನ್ನು ಗೌರವಿಸಿ ಆಶ್ರಮಕ್ಕೆ ಒಮ್ಮೆ ಕುದ್ದು ಭೇಟಿ ನೀಡುವುದಾಗಿ ಭರವಸೆ ನೀಡಿದ್ದಾರೆ. ಅವರ ಆಗಮನಕ್ಕಾಗಿ ಕಾರುಣ್ಯ ಕುಟುಂಬ ಕಾಯುತ್ತಿದೆ.

ನಮ್ಮ ಅಪ್ಪು ಅವರ ಈ ಜನ್ಮದಿನದ ಕಾರ್ಯಕ್ರಮದಲ್ಲಿ ಅವರ ಕುಟುಂಬಕ್ಕೆ ಆಯಸ್ಸು, ಆಯುರಾರೋಗ್ಯ ಸುಖ ಶಾಂತಿ ನೆಮ್ಮದಿಯನ್ನು ಸಕಲ ದೇವಾನುದೇವತೆಗಳು ಕರುಣಿಸಲಿ ಎನ್ನುವ ವಿಶೇಷ ಪ್ರಾರ್ಥನೆಯೊಂದಿಗೆ ಅಪ್ಪು ಅವರಿಗೆ ಜನ್ಮದಿನದ ಶುಭಾಶಯಗಳು ಕೋರಿದ್ದೇವೆ ಎಂದು ಮಾತನಾಡಿ ಆಶ್ರಮದ ಆಶ್ರಯದಾತರುಗಳಿಗೆ ಹಣ್ಣು ಹಂಪಲುಗಳನ್ನು ವಿತರಿಸಿದರು. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಪುಟ್ಟರಾಜ ಕೋಡಿಹಳ್ಳಿ ಸಂಸ್ಥಾಪಕರು ಕೂಡಿಹಳ್ಳಿ ಕಲಾ ಸೇವಾ ಸಂಸ್ಥೆ ತಿಳವಳ್ಳಿ. ಹಾಗೂ ಶ್ರೀಮಠ ಸೇವಾ ಟ್ರಸ್ಟ್ ನ ಸದಸ್ಯರಾದ ಸುಜಾತ ಹಿರೇಮಠ. ಆಶ್ರಮದ ಸಿಬ್ಬಂದಿಗಳಾದ ಸುಜಾತ ಮಲದಗುಡ್ಡ.ಸಿದ್ದಯ್ಯ ಸ್ವಾಮಿ. ಮರಿಯಪ್ಪ.ಮೀನಾಕ್ಷಮ್ಮ. ಲಕ್ಷ್ಮಿ. ಅನೇಕರು ಉಪಸ್ಥಿತರಿದ್ದರು.

## ಶಿಕ್ಷಣ ಮಾರ್ಗದರ್ಶಿ ವಿಶೇಷ

### ಬಿಲಿಬ್.ಐ.ಎಸ್ಸಿ

ಬಿಲಿಬ್.ಐ.ಎಸ್ಸಿ (ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನದ ಪದವಿ) ಒಂದು ವರ್ಷದ ಯುಜಿ ಕೋರ್ಸ್ ಆಗಿದೆ. ಇದು ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನದ (LIS) ವ್ಯವಸ್ಥಿತ ಅಧ್ಯಯನವಾಗಿದೆ. LIS ವೃತ್ತಿಪರರು ಇತಿಹಾಸ, ಸಂಸ್ಕೃತಿ, ಘಟನೆಗಳು, ಸಾಹಿತ್ಯ ಮತ್ತು ಜ್ಞಾನವನ್ನು ದಾಖಲಿಸುವ ದಾಖಲೆಗಳನ್ನು ನಿರ್ವಹಿಸುತ್ತಾರೆ. ಯಾವುದೇ ಹಿನ್ನಲೆಯಲ್ಲಿ ಪದವಿಪೂರ್ವ ಪದವಿ ಹೊಂದಿರುವ ಅಭ್ಯರ್ಥಿಗಳು ಅರ್ಹರು. ಪ್ರವೇಶವು ಪ್ರವೇಶ ಅಥವಾ ಅರ್ಹತೆ ಆಧಾರಿತವಾಗಿರಬಹುದು. ಕೆಲವು ಪ್ರಚಲಿತ ಪ್ರವೇಶ ಪರೀಕ್ಷೆಗಳಲ್ಲಿ CUET PG, CUET, JMI ಪ್ರವೇಶ, CPGET, ಇತ್ಯಾದಿ ಸೇರಿವೆ. IGNOU, ಜಾಮಿಯಾ ಮಿಲಿಯಾ ಇಸ್ಲಾಮಿಯಾ, BK ಬಿರ್ಲಾ ಕಾಲೇಜು, ದೆಹಲಿ ವಿಶ್ವವಿದ್ಯಾಲಯ, ಇತ್ಯಾದಿಗಳು B.Lib.I.Sc ಅನ್ನು ನೀಡುವ ಕೆಲವು ಕಾಲೇಜುಗಳಾಗಿವೆ. ಬಿ.ಲಿಬ್.ಐ.ಎಸ್ಸಿ ಪದವೀಧರರು ಗ್ರಂಥಾಲಯ ನಿರ್ವಹಣೆ, ಮಾಹಿತಿ ಸಂಘಟನೆ, ಸಂಪನ್ಮೂಲ ನಿರ್ವಹಣೆ ಮತ್ತು ಡಿಜಿಟಲ್ ಗ್ರಂಥಾಲಯ ವ್ಯವಸ್ಥೆಗಳಂತಹ ಕ್ಷೇತ್ರಗಳಲ್ಲಿ ಉತ್ತಮ ಸಾಧನೆ ಮಾಡುತ್ತಾರೆ. ಬಿ.ಲಿಬ್.ಐ.ಎಸ್ಸಿ ಪದವೀಧರರು ಗ್ರಂಥಾಲಯಗಳು, ಆರ್ಕೈವ್ಸ್, ರಾಷ್ಟ್ರೀಯ ಗ್ರಂಥಾಲಯಗಳು, ಸರ್ಕಾರಿ ಇಲಾಖೆಗಳು, ಶಿಕ್ಷಣ, ಮಾಧ್ಯಮ ಇತ್ಯಾದಿಗಳಲ್ಲಿ ವಿವಿಧ ಉದ್ಯೋಗ ಪ್ರೊಫೈಲ್‌ಗಳಲ್ಲಿ ಕೆಲಸ ಮಾಡಬಹುದು. ಬಿ.ಲಿಬ್.ಐ.ಎಸ್ಸಿ. ಉದ್ಯೋಗಗಳು ಕ್ಯಾಟಲಾಗ್, ಗ್ರಂಥಪಾಲಕ, ಶಿಕ್ಷಕ, ಡಿಜಿಟಲ್ ಸಂಪನ್ಮೂಲ ವ್ಯವಸ್ಥಾಪಕ, ಆರ್ಕೈವಿಸ್ಟ್, ದಾಖಲೆ ವ್ಯವಸ್ಥಾಪಕ, ಇತ್ಯಾದಿ.

## ರಾಜ್ಯದ ನೀರಿನ ಹಕ್ಕುಗಳನ್ನು ಕಾಯ್ದುಕೊಳ್ಳುವುದು ನಮ್ಮ ಮೊದಲ ಆದ್ಯತೆ: ಡಿ ಕೆ ಶಿವಕುಮಾರ್

ನೈಜ್ಯ ದೆಸೆ ನ್ಯೂಸ್

**ದೆಹಲಿಯ ಕರ್ನಾಟಕ ಭವನದಲ್ಲಿ ನಡೆದ ಈ ಮಹತ್ವದ ಸಭೆಯಲ್ಲಿ ಉಪಮುಖ್ಯಮಂತ್ರಿಗಳಾದ D. K. Shivakumar ಅವರು, "ರಾಜ್ಯದ ನೀರಿನ ಹಕ್ಕುಗಳನ್ನು ಕಾಯ್ದುಕೊಳ್ಳುವುದು ನಮ್ಮ ಮೊದಲ ಆದ್ಯತೆ. ನ್ಯಾಯಾಲಯ ಹಾಗೂ ನ್ಯಾಯಮಂಡಳಿಗಳಲ್ಲಿ ಬಲವಾದ ವಾದ ಮಂಡನೆ ಮೂಲಕ ಕರ್ನಾಟಕದ ಹಕ್ಕುಗಳನ್ನು ಪಡೆಯಲು ಸರ್ಕಾರ ಬದ್ಧವಾಗಿದೆ" ಎಂದು ತಿಳಿಸಿದರು.**




ಕರ್ನಾಟಕದ ಪ್ರಮುಖ ಜಲ ಸಂಪನ್ಮೂಲ ಯೋಜನೆಗಳಾದ ಯುಕೆಪಿ, ಮಹದಾಯಿ, ತುಂಗಭದ್ರ ಗಳಿಂಡಿ Krishna Project, Mahadayi River Water Dispute, Tungabhadra Project ಹಾಗೂ Mekedatu Project ಸಂಬಂಧಿಸಿದ ಸಮಸ್ಯೆಗಳ ಪರಿಹಾರಕ್ಕಾಗಿ ಕಾನೂನು ಹಾದಿಯಲ್ಲಿ ತ್ವರಿತ ಕ್ರಮ ಕೈಗೊಳ್ಳುವ ಅಗತ್ಯತೆಯನ್ನು ಸಭೆಯಲ್ಲಿ ಒತ್ತಿ ಹೇಳಲಾಯಿತು. ಸಣ್ಣ ನೀರಾವರಿ ಸಚಿವರಾದ N. S. Boseraju ಅವರು, ರಾಜ್ಯದ ವಿವಿಧ ಭಾಗಗಳಲ್ಲಿ ನೀರಿನ ಅಭಾವ ನಿವಾರಣೆಗೆ ಈ ಯೋಜನೆಗಳ ಅನುಷ್ಠಾನ ಅತ್ಯಂತ ಅವಶ್ಯಕವಾಗಿದ್ದು, ಎಲ್ಲಾ ಕಾನೂನು ಅಡೆತಡೆಗಳನ್ನು ನಿವಾರಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಹೇಳಿದರು.

ಸಭೆಯಲ್ಲಿ M. B. Patil, H. K. Patil ಹಾಗೂ T. B. Jayachandra ಸೇರಿದಂತೆ ಹಿರಿಯ ನಾಯಕರು ಹಾಗೂ ಕಾನೂನು ತಜ್ಞರು ಭಾಗವಹಿಸಿ? ಅಂತರರಾಜ್ಯ ಜಲ ವಿವಾದಗಳ ನ್ಯಾಯಮಂಡಳಿಗಳಲ್ಲಿ ಬಲವಾದ ವಾದ ಮಂಡನೆ ಸುಪ್ರೀಂ ಕೋರ್ಟ್‌ನಲ್ಲಿ ಪ್ರಗತಿಯಲ್ಲಿರುವ ಪ್ರಕರಣಗಳ ವೇಗವರ್ಧನೆ ಕೇಂದ್ರ ಸರ್ಕಾರದ ಅನುಮತಿ ಪ್ರಕ್ರಿಯೆಗಳನ್ನು ಸರಳೀಕರಣ ಪರಿಸರ ಅನುಮತಿ ಸಂಬಂಧಿತ ಸಮಸ್ಯೆಗಳ ಪರಿಹಾರ ಇತ್ಯಾದಿ ವಿಷಯಗಳ ಕುರಿತು ಸವಿಸ್ತಾರ ಚರ್ಚೆ ನಡೆಸಿದರು. ಒಟ್ಟಾರೆ, ಕರ್ನಾಟಕದ ನೀರಾವರಿ ಯೋಜನೆಗಳಿಗೆ ಸಂಬಂಧಿಸಿದ ವಿಳಂಬವನ್ನು ಕಡಿಮೆ ಮಾಡಿ, ರಾಜ್ಯದ ರೈತರಿಗೆ ಶೀಘ್ರ ಲಾಭ ತಲುಪುವಂತೆ ಮಾಡುವ ಉದ್ದೇಶದಿಂದ ಸರ್ಕಾರ ಗಂಭೀರವಾಗಿ ಕ್ರಮ ಕೈಗೊಳ್ಳುತ್ತಿರುವುದು ಈ ಸಭೆಯಿಂದ ಸ್ಪಷ್ಟವಾಗಿದೆ.

## ದೇವರ ದಾಸಿಮಯ್ಯ ಜಯಂತಿ ಆಚರಣೆ; ಪೂರ್ವಭಾವಿ ಸಿದ್ಧತಾ ಸಭೆ



ನೈಜ್ಯ ದೆಸೆ ನ್ಯೂಸ್

**ರಾಯಚೂರು: ಜಿಲ್ಲಾಡಳಿತದಿಂದ ಮಾರ್ಚ್ 23ರ ಸೋಮವಾರ ದಂದು ದೇವರ ದಾಸಿಮಯ್ಯ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.**

ಮಾರ್ಚ್ 17ರ ಮಂಗಳವಾರ ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ನಡೆದ ದೇವರ ದಾಸಿಮಯ್ಯ ಜಯಂತಿ ಕುರಿತು ಪೂರ್ವಭಾವಿ ಸಭೆ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸರ್ಕಾರದ ಮಾರ್ಗಸೂಚಿಯನ್ವಯ ಜಯಂತಿ ಆಚರಣೆ ನಡೆಯಬೇಕು. ಶಿಷ್ಟಾಚಾರ ಅನುಸಾರ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಜಯಂತಿಗೆ ಆಗಮಿಸುವ ಜನತೆಗೆ ಕುಡಿಯುವ ನೀರು, ಉಪಹಾರ, ಆಸನದ ವ್ಯವಸ್ಥೆ ಮಾಡಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಜಯಂತಿಯನ್ನು ಜಿಲ್ಲೆಯ ಎಲ್ಲ ಶಾಲಾ-ಕಾಲೇಜುಗಳು ಹಾಗೂ ಗ್ರಾಮ ಪಂಚಾಯಿತಿಗಳಲ್ಲಿ ಆಚರಣೆ ಮಾಡುವಂತೆ ಆದೇಶ ಹೊರಡಿಸಲು ಕ್ರಮ ವಹಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು. ಮಾ.23ರಂದು ಶ್ರೀ ದೇವರ ದಾಸಿಮಯ್ಯ ಜಯಂತಿ ಅಂಗವಾಗಿ ಅಂದು ಬೆಳಿಗ್ಗೆ 9ಕ್ಕೆ ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದಿಂದ ಮೆರವಣಿಗೆ ಪ್ರಾರಂಭವಾಗಲಿದೆ.

ಬೆಳಿಗ್ಗೆ 11 ಗಂಟೆಗೆ ನಗರದ ಪಂಡಿತ್ ಸಿದ್ದರಾಮಯ ಜಂಬಲದಿನ್ನಿ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಸಮಾಜದ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗುವಂತೆ ಅಪರ ಜಿಲ್ಲಾಧಿಕಾರಿಗಳು ಸಭೆಯ ಮೂಲಕ ಸಾರ್ವಜನಿಕರಲ್ಲಿ ಮನವಿ ಮಾಡಿದರು. ಇದೇ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರಾದ ಉತ್ತರಾದೇವಿ, ಸಮಾಜದ ಮುಖಂಡರಾದ ಜಿ.ನಾಗರಾಜ ಮಾನವಿ, ಈರಣ್ಣ, ಉದಯ ಕುಮಾರ್, ವೆಂಕಟೇಶ, ಶಿವಾನಂದ, ಶ್ರೀನಿವಾಸ ರಾವ್, ನಿತೀಶ್, ನಾಗಪ್ಪ, ಬಸವರಾಜ, ಹೆಚ್. ಜಮದಗ್ನಿ ಸೇರಿದಂತೆ ಇತರು ಇದ್ದರು.

## ಮಾರ್ಚ್ ಮಾಹೆಯ ಪಡಿತರ ಧಾನ್ಯ ವಿತರಣೆ: ಜಿಲ್ಲಾಧಿಕಾರಿ ನಿತೀಶ್ ಕೆ.

ನೈಜ್ಯ ದೆಸೆ ನ್ಯೂಸ್

**ರಾಯಚೂರು: ಇಲ್ಲಿಯ ಜಿಲ್ಲಾ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯಿಂದ 2026ರ ಮಾರ್ಚ್ ಮಾಹೆಯ ಪಡಿತರ ಧಾನ್ಯಗಳನ್ನು ವಿತರಣೆ ಮಾಡಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ತಿಳಿಸಿದ್ದಾರೆ.**



ಮಾರ್ಚ್ 2026 ರ ಮಾಹೆಗೆ ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ರಾಯಚೂರು ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ (ಎಎವೈ) ಪಡಿತರ ಚೀಟಿಗೆ 35 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 05 ಕೆ.ಜಿ ಸಾರವರ್ಧಿತ ಅಕ್ಕಿ ಇದರ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿಯಲ್ಲಿ ರಾಜ್ಯ ಸರ್ಕಾರದ ಮಾರ್ಗಸೂಚಿಂ-ರುಂತೆ ಏಕ ಸದಸ್ಯ, ದ್ವಿ-ಸದಸ್ಯ ಮತ್ತು ತ್ರಿ-ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ & ರಾಜ್ಯ ವ್ಯಾಪ್ತಿಯ ಅಂತ್ಯೋದಯ (ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುವುದು. ಒಂದು ರಾಷ್ಟ್ರ ಒಂದು ಪಡಿತರ ಚೀಟಿ (ಅಂತರ್ ರಾಜ್ಯ/ಅಂತರ್ ಜಿಲ್ಲೆ) ಪೋರ್ಟಬಿಲಿಟಿ ಜಾರಿಯಲ್ಲಿರುವುದರಿಂದ ಯಾವುದೇ ರಾಜ್ಯದ ಪಡಿತರ ಚೀಟಿದಾರರು ಯಾವುದೇ ವರ್ಗದ ಪಡಿತರ ಚೀಟಿದಾರರು ಯಾವುದೇ ನ್ಯಾಯಬೆಲೆ ಅಂಗಡಿಯಲ್ಲಿ ಪಡಿತರವನ್ನು ಪಡೆಯಲು ಅವಕಾಶ ಕಲ್ಪಿಸಲಾಗಿದೆ. ಯಾವುದೇ ನ್ಯಾಯಬೆಲೆ ಅಂಗಡಿಕಾರರು ಕಡಿಮೆ ಪ್ರಮಾಣದ ಪಡಿತರವನ್ನು ವಿತರಣೆ ಮಾಡಿದ್ದಲ್ಲಿ, ಹಣ ಕೇಳಿದ್ದಲ್ಲಿ ಮತ್ತು ಇತರೆ ದೂರುಗಳಿಗೆ ನಿಶುಲ್ಕ ದೂರವಾಣಿ ಸಂಖ್ಯೆ 1967ಗೆ ಹಾಗೂ ತಾಲ್ಲೂಕಿನಲ್ಲಿರುವ ತಹಶೀಲ್ದಾರರ ಕಚೇರಿಗೆ ಅಥವಾ ಜಿಲ್ಲೆಯ ಉಪನಿರ್ದೇಶಕರ ಕಚೇರಿಗೆ ದೂರನ್ನು ಸಲ್ಲಿಸಬಹುದಾಗಿದೆ. ಈ ಯೋಜನೆಯಡಿ ವಿತರಿಸಲಾದ ಆಹಾರ ಧಾನ್ಯಗಳನ್ನು ಹಣಕ್ಕಾಗಿ ಪಡಿತರ ಚೀಟಿದಾರರು ಮಾರಾಟ ಮಾಡುವುದಾಗಲಿ ಅಥವಾ ಸಂಗ್ರಹಣೆ ಮಾಡುವುದು ಕಂಡುಬಂದಲ್ಲಿ ಅಂತಹ ಪಡಿತರ ಚೀಟಿದಾರರಿಗೆ ವಿತರಿಸಲಾದ ಆಹಾರ ಧಾನ್ಯಗಳಿಗೆ ಮುಕ್ತ ಮಾರುಕಟ್ಟೆ ದರಕ್ಕೆ ದಂಡ ವಿಧಿಸಲಾಗುವುದು ಮತ್ತು ಸದರಿ ಪಡಿತರ ಚೀಟಿಯನ್ನು ಆರು ತಿಂಗಳ ಅವಧಿಗೆ ಅಮಾನತ್ತುಗೊಳಿಸಲಾವುದೆಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿಗೆ ಮೀಸಲಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ ಚುನಾವಣೆ ನಡೆಸಲಾಗುವುದು :ಸಚಿವ ಪ್ರಿಯಾಂಕ ಖರ್ಗೆ

ನೈಜ್ಯ ದೆಸೆ ನ್ಯೂಸ್

**ಬೆಂಗಳೂರು: ಸದನದಲ್ಲಿ ಶಾಸಕರ ಪ್ರಶ್ನೆ : ಸ್ಥಳೀಯ ಜಿಲ್ಲಾ/ತಾಲ್ಲೂಕು ಪಂಚಾಯಿತಿ ಅವಧಿ ಪೂರ್ಣಗೊಂಡು ವರ್ಷಗಳ ಕಳೆದರೂ ಚುನಾವಣೆಯನ್ನು ನಡೆಸದಿರುವುದರಿಂದ ವ್ಯವಸ್ಥೆಯು ಸಂಸ್ಥೆಗಳಾದ ಇನ್ನೂ ಕುಂಠಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಶೀಘ್ರದಲ್ಲಿ ಚುನಾವಣೆ ನಡೆಸಲು ಸರ್ಕಾರ ಕೈಗೊಂಡ ಕ್ರಮಗಳೇನು; ಸದರಿ ಚುನಾವಣೆಗಳನ್ನು/ಪ್ರಕ್ರಿಯೆಗಳನ್ನು ಯಾವಾಗ ಪ್ರಾರಂಭಿಸಲಾಗುವುದು ಎಂದು ಕೇಳಿದಾಗ ಪ್ರಶ್ನೆಗೆ ಉತ್ತರಿಸಿದ ಸಚಿವ ಪ್ರಿಯಾಂಕ ಖರ್ಗೆ, ರಾಜ್ಯದ ಗ್ರಾಮ ಪಂಚಾಯತಿಗಳಿಗೆ ಡಿಸೆಂಬರ್ 2020 ರಲ್ಲಿ ಸದಸ್ಯ ಸ್ಥಾನಗಳಿಗೆ ಚುನಾವಣೆ ನಡೆಸಲಾಗಿರುತ್ತದೆ.**



ಅಧ್ಯಕ್ಷರು ಮತ್ತು ಉಪಾಧ್ಯಕ್ಷರ ಹುದ್ದೆಗಳಿಗೆ ಜನವರಿ-ಫೆಬ್ರವರಿ 2021 ರಲ್ಲಿ ಚುನಾವಣೆ ನಡೆಸಿ ಆಯ್ಕೆ ಮಾಡಲಾಗಿದ್ದು, ಈ ಅವಧಿಯು ಜನವರಿ- ಫೆಬ್ರವರಿ-ಮಾರ್ಚ್ 2026 ರವರೆಗೆ ಇರುತ್ತದೆ. ಜಿಲ್ಲಾ ಪಂಚಾಯತಿ ಮತ್ತು ತಾಲ್ಲೂಕು ಪಂಚಾಯಿತಿಗಳ ಅವಧಿಯು ಜೂನ್ 2021ಕ್ಕೆ ಮುಕ್ತಾಯಗೊಂಡಿರುತ್ತದೆ. ಅವಧಿಯು ಮುಗಿದ ನಂತರ ಚುನಾವಣೆಯನ್ನು ನಡೆಸುವ ಸಿದ್ಧತೆಯಲ್ಲಿದ್ದಾಗ ರಾಜ್ಯದಲ್ಲಿ ಕೋವಿಡ್ ಸಾಂಕ್ರಾಮಿಕ ರೋಗ ಹಿನ್ನೆಲೆಯಲ್ಲಿ ಚುನಾವಣೆ ನಡೆಸಲು ಸಾಧ್ಯವಾಗಲಿಲ್ಲ. ತದನಂತರ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993ಕ್ಕೆ ತಿದ್ದುಪಡಿ ತಂದು ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ರಚಿಸಲಾಗಿತ್ತು.

ಆಯೋಗವು ನೀಡಿದ ಶಿಫಾರಸ್ಸಿನಂತೆ ತಾಲ್ಲೂಕು ಪಂಚಾಯತಿ ಮತ್ತು ಜಿಲ್ಲಾ ಪಂಚಾಯತಿಯ ಸೀಮಾ ಆಯೋಗವನ್ನು ಗಡಿಯನ್ನು ಗುರುತಿಸಿ ಅಧಿಸೂಚಿಸಲಾಗಿತ್ತು. ಪರಿವರ್ತನೆ. ಕೆಲವು ಗ್ರಾಮ ಪಂಚಾಯತಿಗಳು ಪಟ್ಟಣ ಪಂಚಾಯತಿ /ಪುರಸಭೆ/ನಗರ ಸಭೆಗಳಾಗಿ ಯಾಗಿರುವುದರಿಂದ, ಸಂಬಂಧಿಸಿದ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಿಂದ ಕೈ ಬಿಡಲು ಅಧಿಸೂಚನೆ ಹೊರಡಿಸಿ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳ ಸೀಮಾ/ಗಡಿಗಳನ್ನು ಮಾಡಲಾಗಿದೆ.

ಪ್ರಸ್ತುತ ನಗರಾಭಿವೃದ್ಧಿ ಇಲಾಖೆಯು ಡಿಸೆಂಬರ್-2025 ಮತ್ತು ಜನವರಿ 2026 ರಲ್ಲಿ ಕೆಲವು ಗ್ರಾಮ ಪಂಚಾಯತಿಗಳನ್ನು ಪಟ್ಟಣ ಪಂಚಾಯತಿ / ಪುರಸಭೆ /ನಗರ ಸಭೆಗಳಾಗಿ ಪರಿವರ್ತನೆ ಮಾಡಿದ್ದು ಸಂಬಂಧಿಸಿದ ಜಿಲ್ಲಾ ಪಂಚಾಯತಿ ಹಾಗೂ ತಾಲ್ಲೂಕು ಪಂಚಾಯತಿಗಳ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಿಂದ ಕೈ ಬಿಡಲು ಅಧಿಸೂಚನೆ ಹೊರಡಿಸಿ, ಜಿಲ್ಲಾ ಮತ್ತು ತಾಲ್ಲೂಕು ಪಂಚಾಯತಿಗಳ ಸೀಮಾ/ಗಡಿಗಳನ್ನು ನಿಗಧಿ ಮಾಡಲಾಗಿದೆ. , ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿ ಕ್ಷೇತ್ರಗಳಿಗೆ ಮೀಸಲಾತಿ ಪ್ರಕ್ರಿಯೆಯು ಚಾಲ್ತಿಯಲ್ಲಿದ್ದು, ಪ್ರಕ್ರಿಯೆ ಪೂರ್ಣಗೊಂಡ ನಂತರ ಚುನಾವಣೆ ನಡೆಸಲಾಗುವುದು.

## ಕಲಾಲೋಕಕ್ಕೂ ಆವರಿಸಿದ ಮಾಲಿನ್ಯ: ರಹಮತ್ ತರೀಕೆರೆ ಬೇಸರ



ನೈಜ್ಯ ದೆಸೆ ನ್ಯೂಸ್

**ಒಂದು ಕಾಲಕ್ಕೆ ಗೋಡೆಗಳ ಮೇಲೆ ವಿಜಯನಗರದ ಉಕ್ಕು ನಮ್ಮ ಹಕ್ಕು ಎನ್ನುವ ಘೋಷಣೆಗಳನ್ನು ಕೇಳುತ್ತಿದ್ದೆವು. ಮೂರು ದಶಕಗಳಲ್ಲಿ ಎಂಥ ನಾಟಕೀಯ ಬದಲಾವಣೆಗಳಾಗಿವೆ. ಯಾವ ಕಾರ್ಖಾನೆಗಳು ದೇವರಂತೆ ಬಂದು ನಮ್ಮನ್ನು ಉದ್ಧರಿಸಬೇಕು ಎಂದು ಯೋಚಿಸಿದ್ದೆವೊ ಅವೇ ಈಗ ಶಾಪಗ್ರಸ್ತವಾಗಿವೆ' ಎಂದು ಸಂಸ್ಕೃತಿ ಚಿಂತಕ ರಹಮತ್ ತರೀಕೆರೆ ಬೇಸರ ವ್ಯಕ್ತಪಡಿಸಿದರು.**

ನಗರದ ಗಾಣಿಗೇರ ಭವನದಲ್ಲಿ ತಿರುಳನ್ನಡ ಸಾಹಿತಿಗಳ ಸಹಕಾರ ಸಂಘ, ಗಾಣದ ಕಣ್ಣಪ್ಪ ಪತ್ತಿನ ಸಹಕಾರ ಸಂಘ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಸಂಯುಕ್ತ ಆಶ್ರಯದಲ್ಲಿ ನಡೆದ ಪ್ರೊ. ಕೊರಗಲ್ ವಿರೂಪಾಕ್ಷಪ್ಪನವರ ಎರಡು ಪುಸ್ತಕಗಳ ಬಿಡುಗಡೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು 'ಮಕ್ಕಳಿಗೆ ಸಿಗುತ್ತಿರುವುದು ದೂಳು. ಸರ್ಕಾರವನ್ನು ಜಗತ್ತನ್ನು ಆಳುತ್ತಿರುವುದು ಕಾರ್ಪೋರೇಟ್ ವಲಯ' ಎಂದರು. ಸಸಿಗೆ ನೀರು ಎರೆಯುವುದರ ಬದಲು ಸಸಿಯ ಮೇಲೆ ಕುಳಿತ ದೂಳನ್ನು ನೀರು ಹಾಕಿ ತೊಳೆಯುವುದರ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಅವರು 'ಮಾಲಿನ್ಯ ಇದು ಗಾಳಿಗೆ ಸಂಬಂಧಿಸಿದ್ದಲ್ಲ ಇದು ಪ್ರಜಾಸತ್ತೆಯ ಮಾಲಿನ್ಯ. ಯಾವುದೇ ಪುಸ್ತಕಗಳ ಬಿಡುಗಡೆ ಕಾರ್ಯಕ್ರಮದಲ್ಲಿ ಊರಿನ ಸಮಸ್ಯೆಯು ಅದರ ತಲೆಬರಹವಾಗಿ ಬಂದಿದ್ದು ಇದೇ ಮೊದಲು ಇರಬೇಕು' ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

'ಬರಹ ಎನ್ನುವುದು ಮಧ್ಯಮ ವರ್ಗದವರ ವಿಲಾಸವಲ್ಲ. ಜನರ ನೋವಿಗೆ ಸ್ಪಂದಿಸದಿದ್ದರೆ ಅದಕ್ಕೆ ಅರ್ಥವಿಲ್ಲ. ಕೊಪ್ಪಳ ನನ್ನನ್ನು ವೈಚಾರಿಕವಾಗಿ ಬೆಳೆಸಿದ ಕರ್ಮಭೂಮಿ. ಪುಸ್ತಕಗಳು ಬಹಳಷ್ಟಿವೆ. ಆದರೆ ವೈಚಾರಿಕ ಸ್ಪಷ್ಟತೆ ಮುಖ್ಯ. ಪ್ರಜಾಪ್ರಭುತ್ವಕ್ಕಷ್ಟೇ ಅಲ್ಲ ಇಂದಿನ ದಿನಗಳಲ್ಲಿ ಕಲಾಲೋಕಕ್ಕೂ ಮಾಲಿನ್ಯ ಆವರಿಸಿದೆ' ಎಂದರು. ಇದಕ್ಕೂ ಮೊದಲು ರೇಷ್ಮೆ ಕೌದಿ (ವೈಚಾರಿಕ ಬರಹಗಳು) ಕುರಿತು ಹಿರಿಯ ಸಾಹಿತಿ ಎ.ಎಂ. ಮದರಿ, ವೈತರಣಿಯಲ್ಲಿ ಹೆಣ್ಣು (ಕಥಾ ಸಂಕಲನ) ಕುರಿತು ಸಾಹಿತಿ ಸಾವಿತ್ರಿ ಮುಜುಮದಾರ ಮಾತನಾಡಿದರು. ಬಂಡಾಯ ಸಾಹಿತಿ ಅಲ್ಲಮಪ್ರಭು ಬೆಟ್ಟದೂರು ಅಧ್ಯಕ್ಷತೆ ವಹಿಸಿದ್ದರು.

ಸಾಹಿತಿಗಳಾದ ಎಚ್.ಎಸ್. ಪಾಟೀಲ, ಕೆ.ಬಿ.ಬ್ಯಾಳಿ, ಜಿಲ್ಲಾ ಗಾಣಿಗ ಸಮಾಜದ ಅಧ್ಯಕ್ಷ ತೋಟಪ್ಪ ಕಾಮನೂರ, ಕೊಪ್ಪಳ ವಿಶ್ವವಿದ್ಯಾಲಯ ಅತಿಥಿ ಉಪನ್ಯಾಸಕ ಪ್ರವೀಣ ಪೊಲೀಸ ಪಾಟೀಲ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ಬಿ.ಟಿ. ಪಾಟೀಲ, ಲೇಖಕ ವಿರೂಪಾಕ್ಷಪ್ಪ ಕೊರಗಲ್, ಅರುಣಾ ನರೇಂದ್ರ, ನಿವೃತ್ತ ಉಪನ್ಯಾಸಕ ಶಂಭುಲಿಂಗಪ್ಪ ಹರಗೇರಿ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

ನೈಜ್ಯ ದೆಸೆ
ಕನ್ನಡ ದಿನಪತ್ರಿಕೆಯನ್ನು ತಪ್ಪದೆ ಓದಿರಿ.

## ಬಿಜೆಪಿ ನಗರ ಮಂಡಲ ಎಸ್.ಸಿ ಮೋರ್ಚಾ ನೂತನ ಅಧ್ಯಕ್ಷ ಹಸೇನಪ್ಪ ಹೆಚ್. ಸೂಲಂಗಿ ಅವರಿಗೆ ಸ್ನೇಹಿತರ ಬಳಗದಿಂದ ಭವ್ಯ ಸನ್ಮಾನ

ನೈಜ್ಯ ದೆಸೆ ನ್ಯೂಸ್

**ಸಿಂಧನೂರು: ಭಾರತೀಯ ಜನತಾ ಪಾರ್ಟಿ ಸಿಂಧನೂರು ವಿಧಾನಸಭಾ ಕ್ಷೇತ್ರದ ನಗರ ಮಂಡಲ ಎಸ್.ಸಿ ಮೋರ್ಚಾ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಹಸೇನಪ್ಪ ಹೆಚ್. ಸೂಲಂಗಿ ಅವರಿಗೆ ನಗರದ ಪ್ರವಾಸಿ ಮಂದಿರದಲ್ಲಿ ಸ್ನೇಹಿತರ ಬಳಗದ ವತಿಯಿಂದ ಸನ್ಮಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಕಾರ್ಯಕ್ರಮದಲ್ಲಿ ಹಸೇನಪ್ಪ ಹೆಚ್. ಸೂಲಂಗಿ ಅವರನ್ನು ಪುಷ್ಪಗುಚ್ಛ, ಶಾಲು ಮತ್ತು ಹಾರ ಹಾಕಿ ಆತ್ಮೀಯವಾಗಿ ಸನ್ಮಾನಿಸಲಾಯಿತು.**




ಬಳಿಕ ಮಾತನಾಡಿದ ಅವರು, ಸಾಮಾನ್ಯ ಕಾರ್ಯಕರ್ತನಿಗೂ ಅವಕಾಶ ನೀಡಿ ಉತ್ತೇಜನ ನೀಡುವ ಪಕ್ಷ ಭಾರತೀಯ ಜನತಾ ಪಾರ್ಟಿ ಎಂದು ಹೇಳಿದರು. ಮುಖಂಡರಾದ ಕೆ. ಕರಿಯಪ್ಪ, ಎಂ. ದೊಡ್ಡ ಮಾಜಿ ಸಂಸದ ಕೆ. ವಿರೂಪಾಕ್ಷಪ್ಪ, ಬಿಜೆಪಿ ಬಸವರಾಜ ಹಾಗೂ ಗ್ರಾಮೀಣ ಮಂಡಲ ಅಧ್ಯಕ್ಷ ವೆಂಕೋಬ ನಾಯಕ ರಾಮಾತ್ನಾಳ ಅವರ ಮಾರ್ಗದರ್ಶನದಲ್ಲಿ, ನಗರ ಮಂಡಲ ಅಧ್ಯಕ್ಷರಾದ ಸಿದ್ದರಮೇಶ್ ಮನ್ನಾಪುರ ಅವರು ನನ್ನ ಮೇಲೆ ವಿಶ್ವಾಸ ಇಟ್ಟು ನಗರ ಮಂಡಲದ ಎಸ್.ಸಿ ಮೋರ್ಚಾ ಅಧ್ಯಕ್ಷರ ಜವಾಬ್ದಾರಿಯನ್ನು ನೀಡಿದ್ದಾರೆ ಎಂದು ತಿಳಿಸಿದರು.

ಪಕ್ಷದ ಹಿರಿಯ ನಾಯಕರ ಮಾರ್ಗದರ್ಶನ ಮತ್ತು ಕಾರ್ಯಕರ್ತರ ಸಹಕಾರದಿಂದ ಪಕ್ಷದ ಸಂಘಟನೆ ಬಲಪಡಿಸುವ ನಿಟ್ಟಿನಲ್ಲಿ ಕೆಲಸ ಮಾಡುವುದಾಗಿ ಅವರು ಹೇಳಿದರು. ಜೊತೆಗೆ ಸಮಾಜದ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ಹಾಗೂ ಪಕ್ಷದ ತತ್ವಗಳನ್ನು ಜನರಿಗೆ ತಲುಪಿಸುವ ಕೆಲಸವನ್ನು ನಿಷ್ಠೆಯಿಂದ ಮಾಡುವೆ ಎಂದು ಭರವಸೆ ನೀಡಿದರು. ಸನ್ಮಾನ ಕಾರ್ಯಕ್ರಮದಲ್ಲಿ ಮಾತನಾಡಿದ ಸ್ನೇಹಿತರು, ಹಸೇನಪ್ಪ ಹೆಚ್. ಸೂಲಂಗಿ ಅವರು ಸರಳ ಹಾಗೂ ಪರಿಶ್ರಮಿ ಕಾರ್ಯಕರ್ತರಾಗಿದ್ದು, ಮುಂದಿನ ದಿನಗಳಲ್ಲಿ ರಾಜಕೀಯ ಕ್ಷೇತ್ರದಲ್ಲಿ ಇನ್ನಷ್ಟು ದೊಡ್ಡ ಮಟ್ಟದಲ್ಲಿ ಬೆಳೆಯಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಮರಿಯಪ್ಪ (ಬಿಎಸ್ಪಿ), ದುರ್ಗಪ್ಪ ಬಾಲಿ, ಅಶೋಕ್ ಮೇಗಳಮನಿ, ಪಂಪಾಪತಿ ಕೆ. ಹಂಚಿನಾಳ, ಜಮದಗ್ನಿ ಕಾರಟಗಿ, ದುರ್ಗಪ್ಪ ಹೆಡಿಗಿಬಾಳ, ನಾಗರಾಜ್ ಹೆಡಿಗಿಬಾಳ, ಸುರೇಶ್ ಎಲೆ ಕೂಡ್ಲಿಗಿ, ಆಲಂಬಷ ಬೂದಿಹಾಳ್, ಹುಸೇನಪ್ಪ ವಿರುಪಾಪೂರ್ ಸೇರಿದಂತೆ ಅನೇಕ ಸ್ನೇಹಿತರು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.